# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

| ಸಂಪುಟ – 02 | ಸಂಚಿಕೆ – 20 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 20–08–2024 ಮಂಗಳವಾರ | ಪುಟ: 4 | ಬೆಲೆ : ರೂ.2–00 |
|---|---|---|---|---|---|---|
| Volume - 02 | Issue - 20 | Title- Code: KARKAN 28269 | Chitradurga | Date: 20-08-2024 Tuesday | Page: 4 | Price: Rs. 2-00 |



ಒಳಪುಟದ ಸುದ್ದಿಗಳು

ವೈದ್ಯ ವಿದ್ಯಾರ್ಥಿನಿ, ಅತ್ಯಾಚಾರ ಕೊಲೆ ಪ್ರಕರಣ ಖಂಡಿಸಿ ಎಬಿವಿಪಿ ಪ್ರತಿಭಟನೆ 2

ವೈದ್ಯ ವಿದ್ಯಾಥಿನಿ ಮೇಲೆ ಅತ್ಯಾಚಾರ ಎಐಡಿವೈಓ ಖಂಡನೆ 3

ಸಮಾಜ ಸುಧಾರಣೆಗೆ ನುಲಿಯ ಚಂದಯ್ಯ ಅತ್ಯುನ್ನತ ಕೊಡುಗೆ ನೀಡಿದ್ದಾರೆ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ನುಡಿದಂತೆ ನಡೆದ ಸರ್ಕಾರದ ಹೆಗ್ಗಳಿಕೆ

## ತಾಲ್ಲೂಕು ಮಟ್ಟದ ಗ್ಯಾರಂಟಿ ಅನುಷ್ಠಾನ ಯೋಜನೆ ಸಮಿತಿ ಅಸ್ಥಿತ್ವಕ್ಕೆ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ



ನಾಡಿನ ಬಡ ಕುಟುಂಬಗಳ ಕಲ್ಯಾಣಕ್ಕಾಗಿ ಸರ್ಕಾರ ನೀಡಿದ ಐದು ಪ್ರಮುಖ ಗ್ಯಾರಂಟಿಗಳ ಅನುಷ್ಠಾನದ ಮೂಲಕ ಬಡ ಜನತೆಯ ಬದುಕನ್ನು ಹಸನುಗೊಳಿಸಲು ಸರ್ಕಾರ ಕಳೆದ 15 ತಿಂಗಳಿನಿಂದ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿದೆ. ತಾಲ್ಲೂಕಿನಲ್ಲಿ ಈ ಯೋಜನೆಯ ಗುಣಾತ್ಮಕ ಅನುಷ್ಠಾನಕ್ಕಾಗಿ ಸಮಿತಿ ಜಾರಿಗೆ ತಂದಿದ್ದು ಐದು ಗ್ಯಾರಂಟಿ ಯೋಜನೆಗಳು ಜನರ ಅಭ್ಯುದಯಕ್ಕೆ ಪ್ರೇರಣಾ ಶಕ್ತಿಯಾಗಿವೆ ಎಂದು ಕ್ಷೇತ್ರದ ಶಾಸಕ, ಸಣ್ಣ ಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಮೊಟ್ಟಮೊದಲ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಪ್ರಸ್ತುತ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಕಳೆದ ಚುನಾವಣೆಯಲ್ಲಿ ನೀಡಿದ ಭರವಸೆಯಂತೆ ಮಹಿಳೆಯರಿಗೆ ಶಕ್ತಿಯೋಜನೆಯ ಮೂಲಕ ಉಚಿತ ಪ್ರಯಾಣ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ, ಅನ್ನಭಾಗ್ಯ ಯೋಜನೆಗಳ ಪ್ರಗತಿಯ ಪರಿಶೀಲನೆ ನಡೆಸಿದರು. ತಾಲ್ಲೂಕು ಅನುಷ್ಠಾನ ಸಮಿತಿ ಅಧ್ಯಕ್ಷರಾಗಿ ಆಯ್ಕೆಯಾದ ಗದ್ದಿಗೆ ತಿಪ್ಪೇಸ್ವಾಮಿ, ಎಚ್.ಆಂಜನೇಯ, ಕವಿತಾ, ಪುರುಷೋತ್ತಮನಾಯ್ಕ, ಎಸ್. ಮುಜೀಬುಲ್ಲಾ, ಹನುಮಂತರೆಡ್ಡಿ, ಅನಿಲ್‌ಕುಮಾರ್, ನಾಗೇಶ್, ಉಮೇಶ್, ಮಲ್ಲಿಕಾರ್ಜುನ್,ತಿಪ್ಪೇಸ್ವಾಮಿ,ಆರ್.ಬಸಪ್ಪ, ಜನಾರ್ಧನ ಇವರನ್ನು ಸನ್ಮಾನಿಸಿದರು.

ಪ್ರಾರಂಭದಲ್ಲಿ ಎಲ್ಲರನ್ನೂ ಸ್ವಾಗತಿಸಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಸ್.ಶಶಿಧರ, ರಾಜ್ಯ ಸರ್ಕಾರ ಮಹತ್ವಕಾಂಕ್ಷಿ ಯೋಜನೆಯಾದ ಐದು ಗ್ಯಾರಂಟಿಗಳ ಅನುಷ್ಠಾನಕ್ಕೆ ಸಮಿತಿ ರಚಿಸಿದ್ದು, ಪ್ರತಿತಿಂಗಳು ಎರಡು ಬಾರಿ ಸಮಿತಿ ಸಭೆ ನಡೆಸಿ ಸಾಧಕ, ಬಾಧಕಗಳ ಬಗ್ಗೆ ಚರ್ಚೆ ನಡೆಸಲಾಗುವುದು ಎಂದರು. ಪ್ರಾರಂಭದಲ್ಲಿ ಬೆಸ್ಕಾಂ ಇಲಾಖೆ ಬಗ್ಗೆ ಮಾಹಿತಿ ನೀಡಿದ ಎಇಇ ಜಿ.ಶಿವಪ್ರಸಾದ್, ಚಳ್ಳಕೆರೆ ವಿಭಾಗದಲ್ಲಿ 52597 ಫಲಾನುಭವಿಗಳ ಸಂಪರ್ಕ ಕಲ್ಪಿಸಬೇಕಿದ್ದು, 451899 ಜನರಿಗೆ ಈ ಯೋಜನೆ ದೊರಕಿದೆ. ನಗರ ಪ್ರದೇಶದಲ್ಲಿ 200 ಯೂನಿಟ್ ವಿದ್ಯುತ್ ಬಳಸುವವರ ಮಾಹಿತಿಯನ್ನು ಸಂಗ್ರಹಿಸಿ ನೀಡಲಾಗುವುದು ಎಂದರು. ತಳಕು ಅಧಿಕಾರಿ ಮಮತ ಮಾಹಿತಿ ನೀಡಿ, 26101 ಗುರಿಇದ್ದು 24444 ಫಲಾನುಭವಿಗಳು ಗೃಹಜ್ಯೋತಿಯೋಜನೆ ಕಲ್ಪಿಸಿದೆ ಎಂದರು. ಕೆಎಸ್‌ಆರ್‌ಟಿಸಿ ಡಿಪೋ ವ್ಯವಸ್ಥಾಪಕ ಪ್ರಭು ಮಾಹಿತಿ ನೀಡಿ, ಕಳೆದ ಜೂನ್‌ನಿಂದ ಆಗಸ್ಟ್ 13ವರೆಗೂ 4.78 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣ ಬೆಳೆಸಿ ಒಟ್ಟು 19.27 ಕೋಟಿ ಆದಾಯ ಲಭಿಸಿದೆ ಎಂದರು. ಮುಂದಿನ ದಿನಗಳಲ್ಲಿ ಚಳ್ಳಕೆರೆ ಘಟಕದಿಂದ ಹೊಸ ಮಾರ್ಗಗಳಲ್ಲಿ 8 ಬಸ್‌ಗಳನ್ನು ಸಮರ್ಪಿಸಲಾಗುವುದು ಎಂದರು. ಯುವ ನಿಧಿ ಅಧಿಕಾರಿ ಮಾಹಿತಿ ನೀಡಿ, ತಾಲ್ಲೂಕಿನಾದ್ಯಂತ ಒಟ್ಟು 1835 ಫಲಾನುಭವಿಗಳು ನೊಂದಾವಣೆ ಮಾಡಿದ್ದು 55 ಲಕ್ಷ ಹಣವನ್ನು ವಿತರಣೆ ಮಾಡಲಾಗಿದೆ ಎಂದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ಹರಿಪ್ರಸಾದ್ ಮಾಹಿತಿ ನೀಡಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ 54019 ಫಲಾನುಭವಿಗಳು ನೊಂದಾವಣೆಯಾಗಿದ್ದು, 53590 ಫಲಾನುಭವಿಗಳಿಗೆ ಗೃಹಲಕ್ಷ್ಮಿ ಯೋಜನೆಯಡಿ ಸೌಲಭ್ಯ ಕಲ್ಪಿಸಿದೆ ಎಂದರು. ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಶ್ರೀನಿವಾಸ್ ಮಾಹಿತಿ ನೀಡಿ, ನೂತನ ಪಡಿತರಚೀಟಿ ನೀಡಲು ಆರ್ಜಿ ಆಹ್ವಾನಿಸಿದ್ದು ಎರಡು ಸಾವಿರ ಅರ್ಜಿಗಳು ಆನ್‌ಲೈನ್ ಮೂಲಕ ಬಂದಿವೆ ಎಂದರು. ಕೃಷಿ ಅಧಿಕಾರಿ ಜೆ.ಅಶೋಕ್ ಮಾಹಿತಿ ನೀಡಿ, ವಾಡಿಕೆಮಳೆಗಿಂತ ಹೆಚ್ಚು ಮಳೆಯಾಗಿದ್ದು, ಈಗಷ್ಟೇ ಬಿತ್ತನೆ ಕಾರ್ಯ ಆರಂಭವಾಗಿದೆ. ಶೇಂಗಾ, ಸೂರ್ಯಕಾಂತಿ, ಮೆಕ್ಕೆಜೋಳ, ತೊಗರಿ, ರಾಗಿ ಮುಂತಾದ ಬೆಳೆಗಳ ಬಿತ್ತನೆ ಕಾರ್ಯ ಆರಂಭವಾಗಿದೆ. ತಾಲ್ಲೂಕಿನಾದ್ಯಂತ ಒಟ್ಟು 13ಸಾವಿರ ಕ್ವಿಂಟಾಲ್ ಶೇಂಗಾ ಬಿತ್ತನೆ ಬೀಜ ದಾಸ್ತಾನು ಮಾಡಿದ್ದು ಆಪೈಕಿ 11200 ಕ್ವಿಂಟಾಲ್ ಶೇಂಗಾ ಬಿತ್ತನೆ ಬೀಜ ಈಗಾಗಲೇ ವಿತರಣೆ ಮಾಡಿದೆ ಎಂದರು. ಗ್ರಾಮೀಣಾಭಿವೃದ್ಧಿ ಮತ್ತು ಕುಡಿಯುವ ನೀರು ವಿಭಾಗದ ಅಧಿಕಾರಿ ಮಾಹಿತಿ ನೀಡಿ, ತಾಲ್ಲೂಕಿನಾದ್ಯಂತ ಜೆಜೆಎಂ ಕಾಗಮಾರಿ ಪ್ರಗತಿಯಲ್ಲಿದೆ. ಯಾವಭಾಗದಲ್ಲೂ ಕುಡಿಯುವ ನೀರಿನ ಸಮಸ್ಯೆ ಇಲ್ಲವೆಂದರು.

## ಫಾಸ್ಟ್ ನ್ಯೂಸ್

### ವಾಲ್ಮೀಕಿ ಸಮಾಜದ ಹಿರಿಯ ಮುಖಂಡ ಮಳಲಿ ರಾಜಪ್ಪ ನಿಧನ

» ಹೊಸದುರ್ಗ



ತಾಲೂಕಿನ ಜಾನಕಲ್ ನಾಯಕರಹಟ್ಟಿ ಗ್ರಾಮದ ವಾಲ್ಮೀಕಿ ಸಮಾಜದ ಹಿರಿಯ ಕೃಷಿಕ, ಮಳಲಿ ರಾಜಪ್ಪ(65) ತೀವ್ರ ಹೃದಯ ಘಾತದಿಂದ ನಿಧನ ಹೊಂದಿದ್ದು ಮೃತರು ಹೊಸದುರ್ಗ ತಾಲೂಕ್ ಪಂಚಾಯಿತಿ ಮಾಜಿ ಅಧ್ಯಕ್ಷೆ ದಿ!! ಬೋರಮ್ಮ ಇವರ ಪತಿಯಾಗಿದ್ದು ಮೃತರಿಗೆ ಎರಡು ಜನ ಮಕ್ಕಳಿದ್ದು ಮೃತರ ಅಂತ್ಯಕ್ರಿಯೆ ಜಾನಕಲ್ ನಾಯಕರಹಟ್ಟಿ ತಮ್ಮ ಜಮೀನಿನಲ್ಲಿ ನೆರವೇರಲಿತು.

### ಆಗಸ್ಟ್ 23ರಂದು ನೇರ ನೇಮಕಾತಿ ಸಂದರ್ಶನ

» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದೇ ಆಗಸ್ಟ್ 23ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ರವರೆಗೆ ನೇರ ನೇಮಕಾತಿ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಮೇಳದಲ್ಲಿ 03ಕ್ಕೂ ಹೆಚ್ಚಿನ ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಪುರುಷ, ಮಹಿಳಾ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆಮಾಡಿಕೊಳ್ಳಲಿವೆ. ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೊಮಾ, ಐಟಿಐ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿರುವ ಅಭ್ಯರ್ಥಿಗಳು ಭಾಗವಹಿಸಬಹುದು. ಸಂದರ್ಶನಕ್ಕೆ ಆಗಮಿಸುವಾಗ 5 ಪ್ರತಿ ಬಯೋಡೇಟಾ, ವಿದ್ಯಾರ್ಹತೆ ಪ್ರಮಾಣ ಪತ್ರ ಹಾಗೂ ಫೋಟೋಗಳನ್ನು ತರಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಸ್ಟೇಡಿಯಂ ರಸ್ತೆ ತಿರುವಿನಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿಗೆ ಭೇಟಿ ನೀಡಬಹುದು. ಕಚೇರಿ ದೂರವಾಣಿ ಸಂಖ್ಯೆ 7022459064 8105619020, 9945587060 ಗೆ ಸಂಪರ್ಕಿಸಬಹುದು.

### ಹಿಂದಿ ಅನುವಾದ ಹುದ್ದೆಗಳ ನೇಮಕಾತಿಗಾಗಿ ಅರ್ಜಿ

» ಚಿತ್ರದುರ್ಗ

ಸಿಬ್ಬಂದಿ ನೇಮಕಾತಿ ಆಯೋಗವು ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹಿಂದಿ ಅನುವಾದಕರ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಿದೆ. ಕಂಪ್ಯೂಟರ್ ಆಧಾರಿತವಾಗಿ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಹಿಂದಿ ಅಥವಾ ಇಂಗ್ಲೀಷ್‌ನಲ್ಲಿ ಸಾತ್ನಕೋತ್ತರ ಪದವಿ ಪಡೆದಿರಬೇಕು. ಪದವಿಯಲ್ಲಿ ಹಿಂದಿ ಅಥವಾ ಇಂಗೀಷ್ ವಿಷಯವನ್ನು ಕಡ್ಡಾಯವಾಗಿ ಓದಿರಬೇಕು. ಹಿಂದಿಯಿಂದ ಇಂಗ್ಲೀಷ್ ಭಾಷಾಂತರದಲ್ಲಿ ಡಿಪ್ಲೋಮ ಪದವಿ ಪಡೆದಿರಬೇಕು ಅಥವಾ ಭಾಷಾಂತರದಲ್ಲಿ ಕೇಂದ್ರ ಅಥವಾ ರಾಜ್ಯ ಸರ್ಕಾರದ ಇಲಾಖೆಗಳಲ್ಲಿ ಎರೆಡು ವರ್ಷ ಕಾರ್ಯ ನಿರ್ವಹಿಸಿದ ಅನುಭವ ಇರಬೇಕು. 18–30 ವರ್ಷದೊಳಗಿನ ವಯೋಮಿತಿ ನಿಗದಿ ಮಾಡಲಾಗಿದೆ. ಎಸ್.ಸಿ. ಎಸ್.ಟಿ, ಓಬಿಸಿ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ವಯೋಮಿತಿ ಸಡಲಿಕೆ ಇರುತ್ತದೆ. ಅರ್ಜಿ ಸಲ್ಲಿಸಲು ಆಗಸ್ಟ್ 25 ಕಡೆಯ ದಿನವಾಗಿದೆ. ನೇಮಕಾತಿ ಪರೀಕ್ಷೆಯು ಅಕ್ಟೋಬರ್ ಅಥವಾ ನವೆಂಬರ್ ಮಾಹೆಯಲ್ಲಿ ಜರುಗಲಿದೆ. ಹೆಚ್ಚಿನ ಮಾಹಿತಿಗಾಗಿ www.ssckkr.kar.nic.in https://ssc.nic.in ವೆಬ್ ಸೈಟ್‌ಗೆ ಭೇಟಿ ನೀಡಬಹುದು. ನೇಮಕಾತಿ ಆಯೋಗದ ದೂರವಾಣಿ ಸಂಖ್ಯೆ 080–25502520 ಕರೆ ಮಾಡಬಹುದು. ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಕಚೇರಿ ದೂರವಾಣಿ ಸಂಖ್ಯೆ 9945587060, 7022459064 ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿಎಂ ಬೆನ್ನಿಗೆನಿಂತ ಮಠಾಧೀಶರ ಒಕ್ಕೂಟ

## ಕರ್ನಾಟಕ ರಾಜಕಾರಣದ ಅಪರೂಪದ ಅಹಿಂದ ನಾಯಕನೆಂದು ಪ್ರತಿಪಾದನೆ

» ಹೊಸದುರ್ಗ



ಉತ್ತಮ ಆಡಳಿತ ಯಂತ್ರಕ್ಕೆ ಅತ್ಯುತ್ತಮ ನಾಯಕನ ಅವಶ್ಯಕತೆಯಿದೆ. ಆಡಳಿತ ಪಕ್ಷಗಳು ಪಾರದರ್ಶಕವಾಗಿ ದೋಷಮುಕ್ತವಾಗಿ ಹಾಗೂ ವಿರೋಧ ಪಕ್ಷಗಳು ಲೋಪದೋಷಗಳನ್ನು ಎತ್ತಿಹಿಡಿಯುವ ಪ್ರಕ್ರಿಯಯೂ ಆಡಳಿತದಲ್ಲಿ ಸಹಜವಾಗಿರುವಂತಹದ್ದು. ಕಳಂಕ ರಹಿತ ಬದುಕನ್ನು ನಡೆಸಿ, ಸಿದ್ದರಾಮಯ್ಯ ಮಾದರಿ ವ್ಯಕ್ತಿತ್ವವನ್ನು ಬೆಳೆಸಿಕೊಂಡು ರಾಜಕೀಯ ಮಾಡಿಕೊಂಡು ಬಂದಿರುವ ಅಪರೂಪದ ನಾಯಕ ಎಂದು ಹಿಂದುಳಿದ ದಲಿತ ವರ್ಗಗಳ ಮಠಾಧೀಶರ ಒಕ್ಕೂಟ ಸೋಮವಾರ ಪತ್ರಿಕಾ ಪ್ರಕಟಣೆಯ ಪ್ರತಿಪಾದಿಸಿದ್ದಾರೆ. ಕೆಲವೊಮ್ಮೆ ಪ್ರತ್ಯಕ್ಷವಾಗಿ ನೋಡಿದರೂ, ಪ್ರಾಮಾಣಿಸಿ ನೋಡಬೇಕು ಅಂತ ಗಾದೆಮಾತನ್ನು ನೆನಪಿಸಿಕೊಳ್ಳಬೇಕಾಗುತ್ತದೆ. ಮುಡಾ ಪ್ರಕರಣದಲ್ಲಿ ಸತ್ಯ ಪ್ರತಿಪಾದಿಸಲು ಕಾನೂನಿನಲ್ಲಿ ಅನೇಕ ಅವಕಾಶಗಳು ಇವೆ.

ಪುಟ 3

### ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳದಂತೆ ಅರಿವು



ಚಿತ್ರದುರ್ಗ: ಪಾನ್–ಇಂಡಿಯಾ ರೆಸ್ಕ್ಯೂ ಅಂಡ್ ರಿಹಾಬಿಲಿಟೇಷನ್ ಕ್ಯಾಂಪೇನ್ ಅಂಗವಾಗಿ ಹಿರಿಯೂರು ನಗರದಲ್ಲಿ ಸೋಮವಾರ ಬಾಲ್ಯ ಹಾಗೂ ಕಿಶೋರಾವಸ್ಥೆ ಕಾರ್ಮಿಕ ನಿಷೇಧ ಕುರಿತು ದಾಳಿ ನಡೆಸಲಾಯಿತು. ಹಿರಿಯೂರು ನಗರದ ವಿವಿಧ ವಾಣಿಜ್ಯ ಸಂಸ್ಥೆಗಳು, ಹೋಟೆಲ್‌ಗಳಿಗೆ ಭೇಟಿ ನೀಡಿ ಸಂಸ್ಥೆಯ ಮಾಲೀಕರಿಗೆ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು ಎಂದು ಅರಿವು ಮೂಡಿಸಲಾಯಿತು ತಂಡದಲ್ಲಿ ಕಾರ್ಮಿಕ ನಿರೀಕ್ಷಕ ಅಲ್ಲಾಭಕ್ಷಿ, ಬಾಲಕಾರ್ಮಿಕ ಯೋಜನಾ ಸೋಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಆನಂದ್ ಕುಮಾರ್ ಇದ್ದರು.

## ಪ್ರಮುಖ ಸುದ್ದಿ

### ಪರಿಶಿಷ್ಟ ಜಾತಿಯಲ್ಲೇ ಅತಿದೊಡ್ಡ ಸಮುದಾಯವಾಗಿದ್ದರೂ ಇತರ ಒಳಪಂಗಡದವರ ಜೊತೆ ಅಣ್ಣ ತಮ್ಮಂದಿರಂತೆ ಇರಬೇಕು

# ನಮ್ಮನ್ನು ಚಲವಾದಿ ಎಂದು ಕರೆದರೆ ಖುಷಿಪಡಿ

» ಚಿತ್ರದುರ್ಗ



ನಾವು ಚಲವಾದಿಗಳು, ನಮ್ಮ ಸಮುದಾಯದ ಹೆಸರು ಹೇಳಿಕೊಳ್ಳಲು ಹೆಮ್ಮೆಪಡಬೇಕು. ನಮ್ಮ ಜಾತಿಯ ಕೀಳರಿಮೆ ನಮ್ಮನ್ನೇ ಕಾಡುವಂತೆ ಮಾಡಿಕೊಂಡಿದ್ದೇವೆ ನಮ್ಮನ್ನು ಚಲವಾದಿ ಎಂದು ಕರೆದರೆ ಖುಷಿಪಡಬೇಕು, ನಮ್ಮದು ಪರಿಶಿಷ್ಟ ಜಾತಿಯಲ್ಲೇ ಅತಿದೊಡ್ಡ ಸಮುದಾಯವಾಗಿದ್ದರೂ ಇತರ ಒಳಪಂಗಡದವರ ಜೊತೆ ಅಣ್ಣ ತಮ್ಮಂದಿರಂತೆ ಇರಬೇಕು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಚಲವಾದಿ ನಾರಾಯಣ ಸ್ವಾಮಿ ಕರೆ ನೀಡಿದರು.

ಚಿತ್ರದುರ್ಗ ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಭಾನುವಾರ ಚಲವಾದಿ ಸಮುದಾಯದವತಿಯಿಂದ ಆಯೋಜಿಸಲಾಗಿದ್ದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು ನಾವು ಕುಳಿತಲ್ಲೇ ಕುಳಿತು ಸಮಾಧಾನ ಪಟ್ಟುಕೊಳ್ಳಬಾರದು, ಸಮಾಜದ ಮುಖ್ಯವಾಹಿನಿ ಕಡೆ ದೌಡಾಯಿಸಬೇಕು, ನಾವು ಚಲವಾದಿಗಳು, ನಮ್ಮ ಸಮುದಾಯದ ಹೆಸರು ಹೇಳಿಕೊಳ್ಳಲು ಹೆಮ್ಮೆಪಡಬೇಕು. ನಮ್ಮ ಜಾತಿಯ ಕೀಳರಿಮೆ ನಮ್ಮನ್ನೇ ಕಾಡುವಂತೆ ಮಾಡಿಕೊಂಡಿದ್ದೇವೆ, ನಮ್ಮ ಜನಾಂಗಕ್ಕೆ ಗೌರವ ತರುವಂತೆ ಹಿರಿಯರೆಲ್ಲ ಚರ್ಚಿಸಿ ಚಲವಾದಿ ಎಂಬ ಹೆಸರನ್ನು ಬದಲಾಯಿಸಿಕೊಂಡಿದ್ದೇವೆ, ನಮ್ಮನ್ನು ಚಲವಾದಿ ಎಂದು ಕರೆದರೆ ಖುಷಿಪಡಬೇಕು, ನಮ್ಮದು ಪರಿಶಿಷ್ಟ ಜಾತಿಯಲ್ಲೇ ಅತಿದೊಡ್ಡ ಸಮುದಾಯವಾಗಿದ್ದರೂ ಇತರ ಒಳಪಂಗಡದವರ ಜೊತೆ ಅಣ್ಣ ತಮ್ಮಂದಿರಂತೆ ಇರಬೇಕು, ನಮ್ಮ ಎಡ ಬಲ ಸಮುದಾಯಗಳು ಒಗ್ಗಟ್ಟಿನಿಂದ ನಮ್ಮ ಜನಪ್ರತಿನಿಧಿಗಳನ್ನು ಆಯ್ಕೆ ಮಾಡಬೇಕು, ಸಮುದಾಯಕ್ಕೆಒಳ್ಳೆಯದನ್ನುಮಾಡದಿದ್ದರೆ ಅಂತಹವರನ್ನು ಸೋಲಿಸುವ ಮೂಲಕ ಪಾಠ ಕಲಿಸಬೇಕು. ಡಾ.ಬಿ. ಆರ್ ಅಂಬೇಡ್ಕರ್ ಅವರು ನಮಗೆ ಮೀಸಲಾತಿ ಕೊಟ್ಟು ಹೋಗಿದ್ದಾರೆ, ಆ ಮೀಸಲಾತಿಗೆ ಗೌರವ ಸಿಗುವ ಕಡೆ ನಾವು ರಾಜಕೀಯ ಶಕ್ತಿ ಪಡೆದುಕೊಳ್ಳಬೇಕು ಎಂದರು.

ಅಧಿಕಾರದಲ್ಲಿರುವ ಕಾಂಗ್ರೆಸ್ ಪಕ್ಷ ಐದು ಗ್ಯಾರೆಂಟಿಗಳನ್ನು ಕೊಡುತ್ತೇವೆ ಎಂದಿದ್ದರು, ಆದರೆ ನಮ್ಮ ಸಮುದಾಯದ ಜನರಿಗೆ ಗ್ಯಾರೆಂಟಿ ಯೋಜನೆ ತಲುಪಿಲ್ಲ, ನಮ್ಮ ಜಾತಿಗಾಗಿ ಮೀಸಲಿಟ್ಟ ಹಣವನ್ನೇ ಬಳಸಿಕೊಂಡು ಗ್ಯಾರೆಂಟಿ ಹೆಸರಲ್ಲಿ ನಮಗೇ ಕೊಡುತ್ತಿದ್ದಾರೆ, ಬೇರೆ ಸಮುದಾಯಗಳಿಗೆ ಕೊಡುವಂತೆ ಸರ್ಕಾರದ ಯೋಜನೆಯ ಹಣದಿಂದ ಗ್ಯಾರೆಂಟಿ ಯೋಜನೆಗಳನ್ನು ಕೊಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ಭಾಗ್ಯಜ್ಯೋತಿ, ಕುಟೀರ ಜ್ಯೋತಿ ಯೋಜನೆಗಳನ್ನು ಬೊಮ್ಮಾಯಿಯವರು ಉಚಿತವಾಗಿ ಕೊಟ್ಟಿದ್ದರು, ಆದರೆ ಈಗ ನಮ್ಮ ಮೀಸಲಾತಿ ಹಣದಿಂದ ನಮಗೆ ಉಚಿತ ವಿದ್ಯುತ್ ಕೊಡುತ್ತಿದ್ದಾರೆ ಎಂದರೆ ಪರೋಕ್ಷವಾಗಿ ನಾವೇ ಬಿಲ್ ಕಟ್ಟುತ್ತಿದ್ದೇವೆ, ನಾವು ನಮಗೆ ಅರಿವಿಲ್ಲದಂತೆ ಕಾಂಗ್ರೆಸ್ ಸರ್ಕಾರದಿಂದ ವಂಚನೆಗೆ ಒಳಗಾಗುತ್ತಿದ್ದೇವೆ. ಹೀಗಾಗಿ ನಮ್ಮ ಸಮುದಾಯ ಒಗ್ಗಟ್ಟಾಗಿ ಪ್ರಶ್ನೆ ಮಾಡದಿದ್ದರೆ ನಾವು ಹಿಂದುಳಿದವರಾಗೇ ಇರಬೇಕಾಗುತ್ತದೆ ಎಂದು ಸಮುದಾಯದವರಿಗೆ ಕಿವಿ ಮಾತು ಹೇಳಿದರು. ಸಮಾರಂಭದ ದಿವ್ಯ ಸಾನಿಧ್ಯವನ್ನು ಛಲವಾದಿ ಗುರುಪೀಠದ ಶ್ರೀ ಬಸವನಾಗಿದೇವ ಸ್ವಾಮೀಜಿ ವಹಿಸಿದ್ದರು. ಅದ್ಯಕ್ಷತೆಯನ್ನು ಬಿ.ಜೆ.ಪಿಯ .ಯುವ ಮೋರ್ಚಾ ರಾಜ್ಯ ಕಾರ್ಯದರ್ಶಿ ಸಮುದಾಯದ ಯುವ ನಾಯಕಿ ಭಾರ್ಗವಿ ದ್ರಾವಿಡ್ ವಹಿಸಿದ್ದರು. ಜಿಲ್ಲಾ ಛಲವಾದಿ ಮಹಾಸಭ ಅದ್ಯಕ್ಷ ಹೆಚ್.ಶೇಷಪ್ಪ. ರುದ್ರಯ್ಯ. ಚನ್ನಬಸಪ್ಪ ಮುಸ್ಟೂರು. ಬಿಜೆಪಿ ಜಿಲ್ಲಾ ಅದ್ಯಕ್ಷ ಎ. ಮುರಳಿ. ರವೀಂದ್ರ ಮರಿಕುಂಟೆ. ಮಂಜುಳಾ ದೇವಿ. ಓಂಕಾರಮೂರ್ತಿ. ದೀಪು. ತಿಪ್ಪೇಸ್ವಾಮಿ. ಆನಂದ ಪೈಲಟ್. ರೇಖಾ ಮತ್ತಿತರಿದ್ದರು.





## ಫಾಸ್ಟ್ ನ್ಯೂಸ್

### ಶಸ್ತ್ರ ಚಿಕಿತ್ಸೆ ಶಿಬಿರ

» ಚಿತ್ರದುರ್ಗ

ಸ್ಪರ್ಶ್ ಫೌಂಡೇಶನ್‌ವತಿಯಿಂದ ನಿವೃತ್ತ ಶಿಕ್ಷಕರಿಗೆ ಉಚಿತವಾಗಿ ಕೀಲು ಬದಲಾವಣೆ ಶಸ್ತ್ರ ಚಿಕಿತ್ಸೆ ಶಿಬಿರವನ್ನು ಆ.22ರಂದು ದಾವಣಗೆರೆಯ ಗುಂಡಿ ವೃತ್ತದ ಬಳಿಯ ಮೋದಿ ಕಾಂಪೌಂಡ್‌ನ ಎಸ್.ಎಸ್.ಸ್ಪೆಷಾಲಿಟಿ ಕ್ಲಿನಿಕ್‌ನಲ್ಲಿ ಆಯೋಜಿಸಲಾಗಿದೆ.

ಸೆ, 5 ಶಿಕ್ಷಕರ ದಿನಾಚಣೆಯ ಅಂಗವಾಗಿ ಬೆಂಗಳೂರಿನ ಸ್ಪರ್ಶ್ ಗ್ರೋಪ್ ಆಸ್ಪತ್ರೆಯ ದತ್ತಿ ವಿಭಾಗದ ಸ್ಪರ್ಶ್ ಫೌಂಡೇಶನ್ ದಾವಣಗೆರೆಯಲ್ಲಿ ನಿವೃತ್ತ ಶಿಕ್ಷಕರಿಗೆ ಉಚಿತ ಕೀಲು ಬದಲಾವಣೆ ಶಸ್ತ್ರ ಚಿಕಿತ್ಸೆಯನ್ನು ಮಾಡಲಿದೆ ಈ ಉಪಕ್ರಮವೂ ಸ್ಪರ್ಶ್ ಫೌಂಡೇಶನ್‌ನ ಸ್ಪರ್ಶ್ ಗುರುನಮನ ಕಾರ್ಯಕ್ರಮದ ಒಂದು ಭಾಗವಾಗಿದೆ. ಇದು ಗ್ರಾಮೀಣ ಹಿನ್ನಲೆಯ ನಿವೃತ್ತ ಶಿಕ್ಷಕರ ಜೀವನದ ದಿಕ್ಕನ್ನು ಬದಲಾಯಿಸಬಲ್ಲ ಕೀಲು ಬದಲಿ ಶಸ್ತ್ರ ಚಿಕಿತ್ಸೆಗಳನ್ನು ಉಚಿತವಾಗಿ ಒದಗಿಸುವ ಗುರಿಯನ್ನು ಹೊಂದಿರುವ ಯೋಜನೆಯಾಗಿದೆ. ಇದರಲ್ಲಿ ಶಸ್ತ್ರ ಚಿಕಿತ್ಸಕರು, ಆಪರೇಷನ್ ಥೀಯೇಟರ್ ಸಿಬ್ಬಂದಿ, ಶುಶೂಷಾ ಸಿಬ್ಬಂದಿ, ಆರೆ ವೈದ್ಯಕೀಯ ಸಿಬ್ಬಂದಿ, ಫಿಸಿಯೋಥೇರೇಪಿಸ್ಟ್‌ಗಳು, ಔದ್ಯೋಗಿಕ ಚಿಕಿತ್ಸಕರು ಮತ್ತು ಆಹಾರ ಒಳಗೊಂಡ ಸಮರ್ಪಿತ ತಂಡವು ಯಾವುದೇ ಶುಲ್ಕ ಇಲ್ಲದೆ ಸೇವೆಗಳನ್ನು ನೀಡಲಿದೆ. ಶಿಬಿರಕ್ಕೆ ಆಗಮಿಸುವವರು ನಾಗರಾಜ್ 8904243944, ಚೇತನ ಕುಮಾರ್ 9980033277 ಈ ದೂರವಾಣಿ ಸಂಖ್ಯೆ ತಮ್ಮ ಹೆಸರನ್ನು ನೊಂದಾಯಿ ಸಬೇಕಿದೆ. ಆ. 22 ರಂದು ಬೆಳಿಗ್ಗೆ 11 ರಿಂದ ಸಂಜೆ 4 ರವರೆಗೆ ಶಿಬಿರ ನಡೆಯಲಿದೆ ಎಂದು ಸಂಘಟಕರು ತಿಳಿಸಿದ್ದಾರೆ.

### ಎಬಿವಿಪಿಯಿಂದ ರಕ್ಷಾ ಬಂಧನ ಆಚರಣೆ



» ಚಿತ್ರದುರ್ಗ

ಜಿಲ್ಲೆಯ ಪೊಲೀಸ್ ಅಡಿಷನಲ್ ಎಸ್.ಪಿ .ಕುಮಾರಸ್ವಾಮಿ, ಪೊಲೀಸ್ ಅಧಿಕಾರಿಗಳು, ಬಿಸಿಎಂ ಇಲಾಖೆ ಅಧಿಕಾರಿಗಳು, ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಲಾಯರ್‌ಗಳೂ, ಪೌರಾಯುಕ್ತರು, ಪೌರಕಾರ್ಮಿಕರು, ಜಿಲ್ಲಾ ಪಂಚಾಯತ್ ಅಧಿಕಾರಿಗಳು, ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಅದ್ಯಾಪಕರುಗಳು ಇನ್ನು ಇತರರಿಗೆ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ವತಿಯಿಂದ ರಕ್ಷೆಯನ್ನು ಕಟ್ಟಿ ರಕ್ಷಾ ಬಂಧನವನ್ನು ಆಚರಿಸಲಾಯಿತು. 'ಗರ ಕಾರ್ಯದರ್ಶಿ ಗೋಪಿ, ರಾಜ್ಯ ಕಾರ್ಯಕಾರಿಣಿ ಕನಕರಾಜ್ ಕೋಡಿಹಳ್ಳಿ, ಸಾಮಾಜಿಕ ಚಿತ್ರಸ್ವಾಮಿ, ಮಹಿಳಾ ಪ್ರಮುಖರಾದ ಚಂದನ, ಕಾರ್ಯಕರ್ತರು ಸುದೀಪ್, ಚರಣ್, ಸಂಜು, ಜೀವನ್, ಮಿಥುನ್, ಆದರ್ಶ ಇನ್ನು ಇತರರು ಭಾಗವಹಿಸಿದ್ದರು.

### 104 ವಿದ್ಯಾರ್ಥಿಗಳಿಗೆ ಸುಜ್ಞಾನನಿಧಿ ಶಿಷ್ಯ ವೇತನ ವಿತರಣೆ

» ಚಳ್ಳಕೆರೆ

ತಾಲ್ಲೂಕಿನ ನಾಯಕನಹಟ್ಟಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾ ಕಚೇರಿಯಲ್ಲಿ ಹಿಂದುಳಿದ ವೃತ್ತಿಪರ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಸುಜ್ಞಾನನಿಧಿ ಶಿಷ್ಯ ವೇತನ ಹಾಗೂ ವಿದ್ಯಾಭ್ಯಾಸವನ್ನು ಪೂರೈಸಿದ ವಿದ್ಯಾರ್ಥಿಗಳಿಗೆ ಪ್ರಮಾಣವನ್ನು ಪತ್ರವನ್ನು ವಿತರಣೆ ಮಾಡಲಾಯಿತು. ಕಾರ್ಯಕ್ರಮಕ್ಕೆ ಚಾಲನೆ ನೀಡಿದ ತಾಲ್ಲೂಕಿನ ವಕೀಲರ ಸಂಘದ ಅಧ್ಯಕ್ಷ ಹಾಗೂ ಮದ್ಯವರ್ಜನ ಶಿಬಿರದ ಹಿರಿಯ ಅಧಿಕಾರಿ ಕೆ.ಎಂ.ನಾಗರಾಜು, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಮಾಜದ ಎಲ್ಲಾ ವರ್ಗಕ್ಕೂ ಆರ್ಥಿಕ ನೆರವು ನೀಡುವ ಮೂಲಕ ಶಕ್ತಿ ತುಂಬಿದೆ. ರೈತರು, ವಿದ್ಯಾರ್ಥಿಗಳು, ಮಹಿಳೆಯರು, ಕೂಲಿಕಾರ್ಮಿಕರು, ಪುರಾತನ ದೇವಸ್ಥಾನಗಳ ಜೀರ್ಣೋದ್ದಾರ ಹೀಗೆ ಹಲವಾರು ಪ್ರಗತಿಪರ ಕಾರ್ಯಕ್ರಮಗಳನ್ನು ಜಾರಿಗೆ ತಂದಿರುವುದು ಸಂತಸ ತಂದಿದೆ ಎಂದರು. ಜಿಲ್ಲಾ ಯೋಜನಾ ನಿರ್ದೇಶಕ ಜನಾರ್ಧನ್ ಮಾತನಾಡಿ, ಪ್ರಾರಂಭದ ಹಂತದಲ್ಲಿ ಪೂಜ್ಯರ ಮಾರ್ಗದರ್ಶನದಲ್ಲಿ ಮಹಿಳಾ ಸ್ತೀಶಕ್ತಿ ಸಂಘಗಳ ಸ್ಥಾಪನೆ, ಅವುಗಳ ಕ್ರಿಯಾಶೀಲ ಚಟುವಟಿಕೆಗೆ ಆದ್ಯತೆ ನೀಡಲಾಯಿತು. ವಿದ್ಯಾರ್ಥಿಗಳು, ರೈತರು ಹಾಗೂ ಕೂಲಿಕಾರ್ಮಿಕರಿಗೂ ಸಹ ವಿವಿಧ ಯೋಜನೆಯಲ್ಲಿ ಆರ್ಥಿಕ ಸಹಾಯ ನೀಡಲಾಯಿತು. ವಿಶೇಷವೆಂದರೆ ಇಡೀ ಬದುಕನ್ನೇ ಬೀದಿಗೆ ತರುತ್ತಿದ್ದ ಕುಡಿತದ ಚಟವನ್ನು ಬಿಡಿಸಲು ಮಧ್ಯವರ್ಜನ ಶಿಬಿರವನ್ನು ಎಲ್ಲೆಡೆ ಹಮ್ಮಿಕೊಳ್ಳಲಾಯಿತು. ಸಾವಿರಾರು ಜನರು ಕುಡಿತದಿಂದ ವಿಮುಕ್ತಿ ಪಡೆದು ನೆಮ್ಮದಿಯ ಬದುಕು ನಡೆಸುವಂತಾಗಿದೆ. ಇಂತಹ ಬದಲಾವಣೆಯಿಂದ ಬದುಕು ಸಾರ್ಥಕತೆಯತ್ತ ತೆರಳುತ್ತದೆ ಎಂದರು. ಕಾರ್ಯಕ್ರಮದಲ್ಲಿ ನೇತಾಜಿ ಪ್ರಸನ್ನ, ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ, ವೀರಶೈವ ಸಮಾಜದ ಹಿರಿಯ ಮುಖಂಡ ಪ್ರಕಾಶ್,ನಾಯಕನಹಟ್ಟಿ ಯೋಜನಾಧಿಕಾರಿ ಅಣ್ಣಪ್ಪ, ತಾಲ್ಲೂಕು ನೋಡಲ್ ಅಧಿಕಾರಿ ಪ್ರವೀಣ್, ಮೇಲ್ವಿಚಾರಕ ಚೇತನ್ ಮುಂತಾದವರು ಉಪಸ್ಥಿತರಿದ್ದರು.

---

ನುಲಿಯ ಚಂದಯ್ಯ ಜಯಂತಿ ಆಚರಣೆ ಸಮಾರಂಭದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ

# ಮಹನೀಯರ ಸಂದೇಶ ಬದುಕಿಗೆ ದಾರಿದೀಪ

■ ಚಿತ್ರದುರ್ಗ

ಮಹನೀಯರ ಜೀವನ, ಸಂದೇಶ, ತತ್ವಾದರ್ಶಗಳು ನಮ್ಮೆಲ್ಲರ ಬದುಕಿಗೆ ದಾರಿದೀಪವಾಗಲಿವೆ ಎಂದು ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಶ್ರೀ ನುಲಿಯ ಚಂದಯ್ಯ ಜಯಂತಿ ಆಚರಣೆ ಸಮಾರಂಭದಲ್ಲಿ ನುಲಿಯ ಚಂದಯ್ಯ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.



ಶರಣರು ಆಚರಣೆಯ ಮೂಲಕ ತೋರಿಸಿಕೊಟ್ಟ ಕಾಯಕ ತತ್ವ ಚಿಂತನೆಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಆರ್.ನುಲೇನೂರು ಗ್ರಾಮದ ನಿವೃತ್ತ ಶಿಕ್ಷಕ ವಿ.ಟಿ.ಚಂದಯ್ಯ ಉಪನ್ಯಾಸ ನೀಡಿ, ಚಂದಯ್ಯನವರು ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಆರ್.ನುಲೇನೂರಿನಲ್ಲಿ ಐಕ್ಯರಾಗಿರುವ ಸಮಾಧಿ ಇದೆ. ಅವರ ಜನ್ಮ ವೃತ್ತಾಂತವನ್ನು ಭಾರತೀಯ ಪುರಾತತ್ವ ಇಲಾಖೆಯು ಸಂಶೋಧನೆಯನ್ನೂ ಮಾಡಿದೆ ಎಂದು ತಿಳಿಸಿದರು.

ಮಹನೀಯರ ಜಯಂತಿ ಅಂಗವಾಗಿ ವಿಚಾರಗಳನ್ನು ಸಮಾಜಕ್ಕೆ ತಿಳುವಳಿಕೆ ನೀಡಲು ಹಲವು ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಆದರೆ ಇಂದು ಭಾಷಣ ಮಾಡುವವರ ಸಂಖ್ಯೆ ಹೇರಳವಾಗಿದ್ದು, ಕೇಳುವ ಮನಸ್ಸುಗಳು ಕಡಿಮೆಯಾಗಿವೆ. ಭಾಷಣ ಮಾಡುವುದು ಸುಲಭ ಆದರೆ ಅದರಂತೆ ಜೀವನದಲ್ಲಿ ಅಳವಡಿಸಿಕೊಂಡು ಬದುಕು ನಡೆಸುವುದು ಕಷ್ಟ ಎಂದು ತಿಳಿಸಿದ ಅವರು, ಶರಣರು ಕಾಯಕ, ದಾಸೋಹ ತತ್ವದ ಮೂಲಕ ಸುಂದರ, ಸರಳತೆಯಿಂದ ಬದುಕು ನಡೆಸಿದರು. ಅದರಂತೆ ನಾವುಗಳು ಕೂಡ ಜೀವನದಲ್ಲಿ ಉತ್ತಮ ಕೆಲಸಗಳನ್ನು ಮಾಡಬೇಕು ಎಂದು ಸಲಹೆ ನೀಡಿದರು.

ಕೊರಮ ಸಮಾಜದ ಜಿಲ್ಲಾ ಅಧ್ಯಕ್ಷ ಕೆ.ಕೃಷ್ಣಪ್ಪ ಮಾತನಾಡಿ, ಶ್ರೀ ನುಲಿಯ ಚಂದಯ್ಯ ಅವರ 917 ನೇ ಜಯಂತಿ ಆಚರಿಸಲಾಗುತ್ತಿದ್ದು, ಕೋಟೆನಾಡಿನಲ್ಲಿ ವಿಜೃಂಭಣೆಯಿಂದ ಜಯಂತಿ ಆಚರಿಸುತ್ತಿರುವುದು ಸಂತಸದ ಸಂಗತಿ ಎಂದರು.

ಜಿಲ್ಲೆಯಲ್ಲಿ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಸಮಾಜದ ಜನರು ಸಂಕಷ್ಟದಿಂದ ಜೀವನ ಸಾಗಿಸುತ್ತಿದ್ದಾರೆ. ನಗರದಲ್ಲಿ ಸಮಾಜದ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕಾಗಿ, ಸಮುದಾಯ ಭವನ ನಿರ್ಮಾಣಕ್ಕಾಗಿ ನಗರಲ್ಲಿ ನಿವೇಶನ ಮಂಜೂರು ಮಾಡುವಂತೆ ಕೋರಿದರು. ನಗರದ ಪ್ರಮುಖ ರಸ್ತೆಗೆ ಶ್ರೀ ನುಲಿಯ ಚಂದಯ್ಯ ಹೆಸರು ನಾಮಕರಣ ಮಾಡಬೇಕು ಎಂದು ಕೋರಿದರು.ಕಾರ್ಯಕ್ರದಲ್ಲಿ ಜಿಲ್ಲಾ ಕೆಡಿಪಿ ಸದಸ್ಯ ಕೆ.ಸಿ.ನಾಗರಾಜ್, ಕೊರಮ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದ್ವಾರಕನಾಥ್, ಗೌರವಾಧ್ಯಕ್ಷ ಹನುಮಂತಪ್ಪ, ನಗರಸಭೆ ನಾಮನಿರ್ದೇಶನ ಸದಸ್ಯ ಬಿ.ನರಸಿಂಹಮೂರ್ತಿ, ನಗರಸಭೆ ಮಾಜಿ ಸದಸ್ಯ ಗೌರಮ್ಮ, ಮುಖಂಡರಾದ ಜಯಶ್ರೀ, ಪರಮೇಶ್, ಮಹಂತೇಶ್, ಧನಂಜಯ್ ಸೇರಿದಂತೆ ಮತ್ತಿತರರು ಇದ್ದರು. ಚಿತ್ರದುರ್ಗದ ಸುಜೀತ್ ಕುಲಕರ್ಣಿ ಅವರ ತಂಡ ಗೀತಗಾಯನ ನಡೆಸಿಕೊಟ್ಟರು. ಕಲಾವಿದ ಹರೀಶ್ ನಿರೂಪಿಸಿದರು.

ಅದ್ದೂರಿ ಮೆರವಣಿಗೆ: ಶ್ರೀ ನುಲಿಯ ಚಂದಯ್ಯ ಜಯಂತಿಯ ಆಚರಣೆ ಅಂಗವಾಗಿ ಸೋಮವಾರ ನಗರದ ಹೊಳಲ್ಕೆರೆ ರಸ್ತೆಯ ನೀಲಕಂಠೇಶ್ವರ ದೇವಸ್ಥಾನದಲ್ಲಿ ಶ್ರೀ ನುಲಿಯ ಚಂದಯ್ಯ ಭಾವಚಿತ್ರ ಮೆರವಣಿಗೆ ತಹಶೀಲ್ದಾರ್ ಡಾ.ನಾಗವೇಣಿ ಹಾಗೂ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಅವರು ಚಾಲನೆ ನೀಡಿದರು.

ನಗರದ ಹೊಳಲ್ಕೆರೆ ರಸ್ತೆಯ ನೀಲಕಂಠೇಶ್ವರ ದೇವಸ್ಥಾನದಿಂದ ಪ್ರಾರಂಭವಾದ ಮೆರವಣಿಗೆಯು ನಗರದ ಪ್ರಮುಖ ವೃತ್ತಗಳ ಮೂಲಕ ಸಾಗಿ, ವೇದಿಕೆ ಕಾರ್ಯಕ್ರಮ ನಡೆಯುವ ತರಾಸು ರಂಗಮಂದಿರದಲ್ಲಿ ಅಂತ್ಯಗೊಂಡಿತು. ಡೋಲು, ತಮಟೆ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳು ಮೆರವಣಿಗೆಗೆ ಮೆರಗು ನೀಡಿದವು.

ಈ ಸಂದರ್ಭದಲ್ಲಿ ಕೊರಮ ಸಮಾಜದ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಕೃಷ್ಣಪ್ಪ ಸೇರಿದಂತೆ ಸಮುದಾಯದ ಮುಖಂಡರು ಇದ್ದರು.

---

# ವೈದ್ಯ ವಿದ್ಯಾರ್ಥಿನಿ, ಅತ್ಯಾಚಾರ ಕೊಲೆ ಪ್ರಕರಣ ಖಂಡಿಸಿ ಎಬಿವಿಪಿ ಪ್ರತಿಭಟನೆ





» ಚಿತ್ರದುರ್ಗ

ಕೊಲ್ಕತ್ತಾದ ಅರ್ ಜಿ ಕರ್ ವೈದ್ಯಕೀಯ ಕಾಲೇಜಿನ ಸೆಮಿನಾರ್ ಹಾಲ್ ನಲ್ಲಿ ಸ್ನಾತಕೋತ್ತರ ತರಬೇತಿ ವೈದ್ಯ ವಿದ್ಯಾರ್ಥಿನಿ ಮೇಲೆ ನಡೆದ ಅತ್ಯಾಚಾರ ಕೊಲೆ ಪ್ರಕರಣ ಖಂಡಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಪ್ರತಿಭಟನೆ ನಡೆಸಿತು.

ವೈದ್ಯೋ ನಾರಾಯಣೋ ಹರಿಃ' ಎಂಬ ಮಾತಿನಂತೆ ವೈದ್ಯನಾದವನು ದೇವರಿಗೆ ಸಮಾನವಾದವನು. ಎಂಬ ಮಾತಿದೆ ಆದರೆ ಪಶ್ಚಿಮ ಬಂಗಾಳದ ಕೊಲ್ಕತ್ತಾದ ಅರ್ ಜಿ ಕರ್ ವೈದ್ಯಕೀಯ ಕಾಲೇಜಿನ ಸೆಮಿನಾರ್ ಹಾಲ್ ನಲ್ಲಿ ಸ್ನಾತಕೋತ್ತರ ತರಬೇತಿ ವೈದ್ಯ ವಿದ್ಯಾರ್ಥಿನಿ ಮೇಲೆ ನಡೆದ ಅತ್ಯಾಚಾರ ಕೊಲೆ ಪ್ರಕರಣ ಮಾನವೀಯ ಸಮಾಜ ತಲೆತಗ್ಗಿಸುವಂತೆ ಆಗಿದೆ. ಕಾಲೇಜಿನ ಸೆಮಿನಾರ್ ಹಾಲ್ ನಲ್ಲಿ ಅತ್ಯಾಚಾರ ಮಾಡುವ ಸ್ಥಿತಿಗೆ ವ್ಯಕ್ತಿಗಳು ಬಂದಿರುವುದಕ್ಕೆ ಮೂಲ ಕಾರಣ ಅಲ್ಲಿನ ರಾಜ್ಯ ಸರ್ಕಾರ ಹಿಂದಿನ ಎಷ್ಟೋ ಪ್ರಕರಣದ ಆರೋಪಿಗಳಿಗೆ ಶಿಕ್ಷೆಯನ್ನು ವಿಧಿಸದೆ ಆರೋಪಿಗಳ ಬೆನ್ನಿಗೆ ನೀರವಾಗಿ ಮಮತಾ ಬ್ಯಾನರ್ಜಿ ಸರ್ಕಾರ ನಿಂತಿರುವುದು ಹಲವು ಪ್ರಕರಣಗಳಲ್ಲಿ ಕಂಡು ಬಂದಿದೆ ಇಂತಹ ಸರ್ಕಾರಗಳ ನಡೆಯಿಂದ ಮತ್ತೆ ಮತ್ತೆ ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳು ನಡೆಯುತ್ತಿವೆ.

ಕಳೆದ ಹಲವು ತಿಂಗಳುಗಳಿಂದ ಪಶ್ಚಿಮ ಬಂಗಾಳದಲ್ಲಿ ಮಹಿಳೆಯರ ಸುರಕ್ಷತೆಗೆ ಸಂಬಂಧಿಸಿದ ಘಟನೆಗಳು ನಡೆಯುತ್ತಿವೆ. ಪಶ್ಚಿಮ ಬಂಗಾಳದ ಮಮತಾ ಸರ್ಕಾರವು ಇಂತಹ ದುಷ್ಕೃತ್ಯಗಳಲ್ಲಿ ತೊಡಗಿರುವ ಜನರನ್ನು ರಕ್ಷಿಸಲು ಪ್ರಯತ್ನಿಸುತ್ತಿದೆ. ಈ ಹಿಂದೆ ಟಿಎಂಸಿ ಗೂಂಡಾಗಳಿಂದ ಇಂತಹ ಅನೇಕ ಅತ್ಯಾಚಾರಗಳು ನಡೆದಿವೆ ಆದರೆ ಮಮತಾ ಸರ್ಕಾರ ಅವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿರಲಿಲ್ಲ. ಬಂಗಾಳದಲ್ಲಿ ನಡೆಯುತ್ತಿರುವ ಈ ಘಟನೆಗಳು ಮಾನವೀಯತೆಗೆ ನಾಚಿಕೆಗೇಡು. ಈ ಘಟನೆಗಳನ್ನು ಗಮನದಲ್ಲಿಟ್ಟು ಕೊಂಡು ಮತ್ತು ಮಮತಾ ಸರ್ಕಾರದ ವಿರುದ್ಧ, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಪ್ರತಿಭಟನೆಯನ್ನು ನಡೆಸಿತು. ಈ ಪ್ರತಿಭಟನೆಯಲ್ಲಿ ನಗರ ಕಾರ್ಯದರ್ಶಿ ಗೋಪಿ, ರಾಜ್ಯ ಕಾರ್ಯಕಾರಿಣಿ ಕನಕರಾಜ್ ಕೋಡಿಹಳ್ಳಿ, ಚಿತ್ರಸ್ವಾಮಿ, ಮಹಿಳಾ ಪ್ರಮುಖರಾದ ಚಂದನ, ಕಾರ್ಯಕರ್ತರು ಸುದೀಪ್, ಚರಣ್, ಸಂಜು, ಜೀವನ್, ಮಿಥುನ್, ಆದರ್ಶ ಇನ್ನು ಇತರರು ಭಾಗವಹಿಸಿದ್ದರು.

---

# ಚಂದಯ್ಯ ಜನರಲ್ಲಿ ಅರಿವಿನ ಹಗ್ಗ ಹೊಸೆದ ಶರಣ

### ಜಯಂತಿ ಕಾರ್ಯಕ್ರಮದಲ್ಲಿ ತಹಶೀಲ್ದಾರ್



» ಹೊಸದುರ್ಗ

ಚಂದಯ್ಯ 'ಚಂದೇಶ್ವರ ಲಿಂಗ' ಎನ್ನುವ ಅಂಕಿತದಲ್ಲಿ 48 ವಚನಗಳನ್ನು ರಚಿಸಿದ್ದು, ವಚನಗಳ ಪಿತಾಮಹ ಎಂದು ಹೆಸರು ಪಡೆದಿರುವ ಫ.ಗು. ಹಳಕಟ್ಟಿಯವರು ಅವುಗಳನ್ನು ಸಂಗ್ರಹ ಮಾಡಿದ್ದಾರೆ. ಈ ಎಲ್ಲಾ ವಚನಗಳಲ್ಲಿ ಕಾಯಕ ಮತ್ತು ದಾಸೋಹದ ಹೇಳಲಾಗಿದೆ. ಚಂದಯ್ಯ ಅಪ್ರಾಮಾಣಿಕತೆ, ಅನಿಷ್ಟಪದ್ಧತಿ, ಆಡಂಬರದ ಭಕ್ತಿ, ನಡೆ-ನುಡಿಯಲ್ಲಿನ ವ್ಯತ್ಯಾಸದ ಕಟುವಾಗಿ ಟೀಕಿಸಿದ್ದಾರೆ. ನುಲಿನ ಚಂದಯ್ಯ ಜನರಲ್ಲಿ ಅರಿವಿನ ಹಗ್ಗ ಹೊಸೆದ ಶ್ರೇಷ್ಠ ವಚನಕಾರ ಎಂದು ತಹಶೀಲ್ದಾರ ತಿರುಪತಿ ಪಾಟೀಲ್ ಹೇಳಿದರು.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ವಚನಕಾರ ನುಲಿನ ಚಂದಯ್ಯನವರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, 12ನೇ ಶತಮಾನದಲ್ಲಿ ಹುಟ್ಟಿಕೊಂಡ ವಚನ ಸಾಹಿತ್ಯ ಚಳುವಳಿಯಲ್ಲಿ ನೂಲಿನ ಚಂದಯ್ಯ ಒಬ್ಬರು. ಕಾಯಕ ನಿಷ್ಠೆಯನ್ನು ಮೈಗೂಡಿಸಿಕೊಂಡು ನೂಲಿನಿಂದ ಹಗ್ಗ ಹೊಸೆದು ಮಾರಾಟ ಮಾಡಿ, ಅದರಿಂದ ಬಂದ ಹಣದಲ್ಲಿ ದಾಸೋಹ ನೆರವೇರಿಸುತ್ತಿದ್ದರು. ಕಾಯಕನಿಷ್ಠೆ ಮತ್ತು ಕಾಯಕವೇ ಕೈಲಾಸ ಎಂಬ ತತ್ವದಲ್ಲಿ ನಂಬಿಕೆಯಿಟ್ಟು ಜೀವನ ಸಾಗಿಸಿದವರು. ಇವರ ವಚನಗಳು ನಮ್ಮ ಮುಂದಿನ ಬದುಕಿಗೆ ದಾರದೀಪವಾಗಬೇಕು ಎಂದು ತಿಳಿಸಿದರು. ಈ ವೇಳೆ ಕಾರ್ಯಕ್ರಮದಲ್ಲಿ ಗ್ರೇಡ್-2 ತಹಸೀಲ್ದಾರ್ ಪಾಲಯ್ಯ, ಲೋಕೋಪಯೋಗಿ ಇಲಾಖೆ ಸಹಾಯಕ ಇಂಜಿನಿಯರ್ ಮಂಜುನಾಥ್, ಎನ್.ಜಿ.ಹಳ್ಳಿ ಗ್ರಾಮದ ಪಿ.ಯು.ಕಾಲೇಜಿನ ಪ್ರಾಂಶುಪಾಲ ಶಿವರುದ್ರಮೂರ್ತಿ, ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ರಮೇಶ್, ಮುಖಂಡರಾದ ಅತ್ತಿಮಗೆ ತಿಮ್ಮಣ್ಣ ಮತ್ತು ಶಿವಣ್ಣ ಸೇರಿದಂತೆ ಇತರರಿದ್ದರು.

---

## ಪ್ರಮುಖ ಸುದ್ದಿ

ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ, ಶಾಸಕ ಬಿ.ಜಿ.ಗೋವಿಂದಪ್ಪ ಅಭಿಮತ

# ದೈಹಿಕ ಮತ್ತು ಮಾನಸಿಕ ಸದೃಢತೆಗೆ ಕ್ರೀಡೆ ಸಹಕಾರಿ

» ಹೊಸದುರ್ಗ

ಪಠ್ಯೇತರ ಚಟುವಟಿಕೆಗಳು ಕೂಡ ಕಲಿಕೆಯ ಒಂದು ಭಾಗವಾಗಿದ್ದು, ಆಟಗಾರನ ದೈಹಿಕ, ಶಾರೀರಿಕ ಮನಸ್ಸನ್ನು ವೃದ್ಧಿಗೊಳಿಸುವ ಸಾಧನವೆಂದೇ ಪರಿಗಣಿತವಾಗಿದೆ. ಅಲ್ಲದೇ ಸದೃಢತೆಗೆ ಸಹಕಾರಿಯಾಗಿದೆ ಎಂದು ಶಾಸಕ ಆಹಾರ ನಿಗಮದ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಸೋಮವಾರ ಶಾಲಾ ಶಿಕ್ಷಣ ಇಲಾಖೆ ಆಯೋಜಿಸಿದ್ದ ಕಸಬ-ಎ ವಿಭಾಗದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.



ಕ್ರೀಡೆಯಲ್ಲಿ ತೊಡಗಿಸಿಕೊಂಡವರಿಗೆ ಯಾವುದೇ ರೋಗಗಳು ಬಾಧಿಸುವುದಿಲ್ಲ. ದೈಹಿಕ ಮತ್ತು ಮಾನಸಿಕವಾಗಿ ಆರೋಗ್ಯವಾಗಿರಲು ಕ್ರೀಡೆಗಳು ಅವಶ್ಯಕವಾಗಿದ್ದು, ವಿದ್ಯಾರ್ಥಿಗಳು ಓದಿನೊಂದಿಗೆ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳಬೇಕು. ವಿಶೇಷವಾಗಿ ದೇಶೀಯ ಆಟಗಳನ್ನು ಆಡಬೇಕು. ಸೋಲು ಮತ್ತು ಗೆಲುವನ್ನು ಸಮನಾಗಿ ಸ್ವೀಕರಿಸಿ, ಎಲ್ಲರೂ ಕ್ರೀಡಾ ಮನೋಭಾವದಿಂದ ಕ್ರೀಡೆಗಳಲ್ಲಿ ಭಾಗವಹಿಸಿ ಜಿಲ್ಲೆ, ರಾಜ್ಯ, ರಾಷ್ಟ್ರ ಮಟ್ಟದ ಕ್ರೀಡೆಗಳಿಗೆ ಆಯ್ಕೆಯಾಗುವ ಮೂಲಕ ರಾಜ್ಯಕ್ಕೆ ಉತ್ತಮ ಕೀರ್ತಿ ತನ್ನಿರಿ ಎಂದು ಶುಭ ಹಾರೈಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ಅಧ್ಯಕ್ಷತೆವಹಿಸಿ ಮಾತನಾಡಿ, ತಾಲ್ಲೂಕಿನ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್ ಆಡಲೂ ಸಿಂಥೆಟಿಕ್ ಟ್ರ್ಯಾಕ್ ಇರುವುದರಿಂದ ಎಲ್ಲ ಹೋಬಳಿಯ ಕ್ರೀಡಾಕೂಟಗಳನ್ನು ಹೊಸದುರ್ಗ ಪಟ್ಟಣದ ಕ್ರೀಡಾಂಗಣದಲ್ಲಿ ನಡೆಸಲಾಗುತ್ತಿದೆ ಎಂದರು.

ಈ ವೇಳೆ ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಕ್ಷೇತ್ರ ದೈಹಿಕ ಶಿಕ್ಷಣ ನಿರ್ದೇಶಕ ಶ್ರೀನಿವಾಸ್, ತಾಲೂಕು ಅಕ್ಷರ ದಾಸೋಹ ನಿರ್ದೇಶಕ ಶಾಂತಪ್ಪ, ಯುವಜನ ಸೇವಾ ಕ್ರೀಡಾಧಿಕಾರಿ ಮಹಾಂತೇಶ, ಕ್ಷೇತ್ರ ಸಮನ್ವಯ ಅಧಿಕಾರಿ ಶ್ರೀನಿವಾಸ, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೆ.ಆರ್.ಮಂಜುನಾಥ್, ಕಾರ್ಯದರ್ಶಿ ಮಲ್ಲಿಕಾರ್ಜುನ್, ಬಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ತಿಪ್ಪೇಶಪ್ಪ, ಶಿಕ್ಷಣ ಸಂಯೋಜಕರಾದ ಶಶಿಧರ್ ಮತ್ತು ಯತೀಶ್ ಸೇರಿದಂತೆ ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ನೂರಾರು ವಿದ್ಯಾರ್ಥಿಗಳಿದ್ದರು.


# ಪ್ರಾಸಿಕ್ಯೂಷನ್‌ಗೆ ಅವಕಾಶ ಕಾಂಗ್ರೆಸ್ ಕಿಡಿ

» **ಚಿತ್ರದುರ್ಗ**

ಮುಖ್ಯಮಂತ್ರಿಸಿದ್ದರಾಮಯ್ಯನವರವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅವಕಾಶ ನೀಡಿರುವುದನ್ನು ವಿರೋಧಿಸಿ ಜಿಲ್ಲಾ ಕಾಂಗ್ರೆಸ್‌ನಿಂದ ಸೋಮವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಮೂಲಕ ಆಗಮಿಸಿದ ಪ್ರತಿಭಟನಾಕಾರರು ಒನಕೆ ಓಬವ್ವ ವೃತ್ತದಲ್ಲಿ ಬಹಿರಂಗ ಸಭೆ ನಡೆಸಿ ನಂತರ ಅಪರ ಜಿಲ್ಲಾಧಿಕಾರಿ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ಯಾವುದೇ ತಪ್ಪಿಲ್ಲದಿದ್ದರು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಮುಡಾ ಹಗರಣದಲ್ಲಿ ಸಿಲುಕಿಸಿ ಬಿಜೆಪಿ.ಯವರು ಮಸಿ ಬಳಿಯುವ ಕುತಂತ್ರ ಮಾಡುತ್ತಿರುವುದು ಖಂಡನೀಯ. 1998 ರಲ್ಲಿ ಮುಡಾದಲ್ಲಿ ನಿವೇಶನ ಪಡೆದಿದ್ದಾರೆನ್ನುವುದನ್ನು ಈಗಕೆದಕುತ್ತಿರುವ ಬಿಜೆಪಿ. ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಅಲುಗಾಡಿಸುವ ಕೃತ್ಯ ನಡೆಸುತ್ತಿದೆ. 2023 ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ 136 ಸೀಟು ಗೆದ್ದಿರುವುದು ಕೋಮುವಾದಿ ಬಿಜೆಪಿ.ಗೆ ಮುಖಭಂಗವಾಗಿರುವುದರಿಂದ ಇಂತಹ ಕ್ಯಾತೆ ಮಾಡುತ್ತಿದೆ. ಸತ್ಯ ಎಂದಿಗೂ ಸೋಲಲ್ಲ. ಇಡಿ ಸಚಿವ ಸಂಪುಟ ಸಿದ್ದರಾಮಯ್ಯನವರ ಬೆನ್ನಿಗಿದೆ. ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಕಾನೂನು ಬಾಹಿರ ಎಂದರು. ಎಂತಹ ಹೋರಾಟ ತ್ಯಾಗಕ್ಕೂ ಸಿದ್ದರಿದ್ದೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜಿನಾಮೆ ನೀಡುವ ಅಗತ್ಯವಿಲ್ಲ ಎಂದು ಬಿಜಪಿ. ಮತ್ತು ಜೆಡಿಎಸ್.ಪಕ್ಷಗಳಿಗೆ ಡಿ.ಸುಧಾಕರ್ ಎಚ್ಚರಿಸಿದರು.



ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡಿ ಬಿಜೆಪಿ. ಏಜೆಂಟರಂತೆ ವರ್ತಿಸುತ್ತಿರುವ ರಾಜ್ಯಪಾಲರು ಶೋಷಿತರ ನ್ಯಾಯದ ಪರವಾಗಿರುವ ಸಿದ್ದರಾಮಯ್ಯನವರಿಗೆ ಪ್ರಾಸಿಕ್ಯೂಷನ್‌ಗೆ ಅವಕಾಶ ನೀಡಿರುವುದು ಸಂವಿಧಾನದಡಿ ಪ್ರಜಾಪ್ರಭುತ್ವಕ್ಕೆ ವಿರುದ್ದವಾಗಿದೆ. ಕಾನೂನಾತ್ಮಕ ಹೋರಾಟ ಮಾಡುತ್ತೇವೆ. ರಾಜ್ಯಪಾಲರು ಅನುಮತಿ ನೀಡಿರುವುದನ್ನು ಹಿಂದಕ್ಕೆ ಪಡೆಯಬೇಕು. ರಾಜ್ಯದಲ್ಲಿ ನಮ್ಮ ಪಕ್ಷ ಆಡಳಿತದಲ್ಲಿದೆ. ಯಾರು ತಾಳ್ಮೆ ಕಳೆದುಕೊಳ್ಳುವುದು ಬೇಡ. ಹಿಂಸಾತ್ಮಕ ಮಾರ್ಗದಲ್ಲಿ ನಡೆಯಬಾರದು. ಕೇಂದ್ರ ಬಿಜೆಪಿ. ಸರ್ಕಾರ ಇಡಿ, ಸಿಬಿಐ. ಚುನಾವಣಾ ಆಯೋಗವನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ. ಬಿಜೆಪಿ. ಅಕ್ರಮವನ್ನು ಯಾರು ಪ್ರಶ್ನಿಸುತ್ತಾರೋ ಅವರ ಮೇಲೆ ಧಾಳಿ ನಡೆಸುವ ಪರಿಪಾಠ ಬೆಳೆಸಿಕೊಂಡಿದೆ. ಇದಕ್ಕೆಲ್ಲಾ ಕಾಂಗ್ರೆಸ್ ಹೆದರುವುದಿಲ್ಲ ಎಂದು ಗುಡುಗಿದರು.

ರಾಜ್ಯದಲ್ಲಿರುವ ಜನಪರ ಆಡಳಿತಕ್ಕೆ ಬಿಜೆಪಿ. ಮಸಿ ಬಳಿಯುತ್ತಿದೆ. ನಲವತ್ತು ಪರ್ಸೆಂಟ್ ಭ್ರಷ್ಠಾಚಾರವೆಸಗಿ ಜನರಿಂದ ಛೀ ಥೂ ಎನ್ನಿಸಿಕೊಂಡಿರುವ ಬಿಜೆಪಿ.ಯವರು ವಾಮ ಮಾರ್ಗದಿಂದ ಅಧಿಕಾರ ಹಿಡಿಯುವುದರಲ್ಲಿ ನಿಸ್ಸೀಮರು. ಮುಡಾದಲ್ಲಿ ಯಾವುದೇ ಅಕ್ರಮ ಎಸಗಿಲ್ಲದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಎದೆಗುಂದುವುದು ಬೇಡ. ಸಿ.ಎಂ.ಪತ್ನಿಗೆ ಅವರ ಸಹೋದರರು ಉಡುಗೊರೆಯಾಗಿ ನೀಡಿರುವ ಜಮೀನಿನಲ್ಲಿ ಪ್ರಾಧಿಕಾರದ ನಿಯಮದಂತೆ ನಿವೇಶನ ಪಡೆದುಕೊಂಡಿದ್ದಾರೆ. ಕಪ್ಪುಚುಕ್ಕೆ ಇಲ್ಲದೆ ದಕ್ಷ ಆಡಳಿತ ನಡೆಸುತ್ತಿರುವುದನ್ನು ಅರಗಿಸಿಕೊಳ್ಳಲು ಆಗದ ಬಿಜೆಪಿ.ಯವರು ಇಲ್ಲಸಲ್ಲದಆಪಾದನೆಮಾಡುತ್ತಿರುವುದರಲ್ಲಿ ಅರ್ಥವಿಲ್ಲ ಎಂದು ಕಿಡಿಕಾರಿದರು.

## ಫಾಸ್ಟ್ ನ್ಯೂಸ್

### ಆಗಸ್ಟ್ 20 ರಿಂದ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-2025 ಆರಂಭ



» **ಚಿತ್ರದುರ್ಗ**

ಭಾರತ ಚುನಾವಣಾ ಆಯೋಗವು ಅರ್ಹತಾ ದಿನಾಂಕ: 01.01.2025 ರಂತೆ ಭಾವಚಿತ್ರ ಸಹಿತ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ–2025 ರ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಪೂರ್ವ ಪರಿಷ್ಕರಣೆ ಚಟುವಟಿಕೆಗಳ ಸಮಯದಲ್ಲಿ ರಾಜ್ಯದ ಎಲ್ಲಾ ಮತಗಟ್ಟೆ ಮಟ್ಟದ ಅಧಿಕಾರಿಗಳು ಪ್ರತಿ ಮನೆಗೂ ಭೇಟಿ ನೀಡಿ ಪರಿಶೀಲನೆ ಕೈಗೊಳ್ಳುತ್ತಾರೆ. ಈ ಸಮಯದಲ್ಲಿ ಸಾರ್ವಜನಿಕರು ಯಾವುದೇ ರೀತಿಯ ತಿದ್ದುಪಡಿಗಳು, ಹೆಸರು ನೋಂದಣಿ, ಮೃತ ಮತ್ತು ಸ್ಥಳಾಂತರಗೊಂಡ ಮತದಾರರ ಹೆಸರುಗಳ ತೆಗೆದು ಹಾಕುವಿಕೆ ಮತ್ತು ಮುಂಬರುವ ಅರ್ಹತಾ ದಿನಾಂಕಗಳಂತೆ 18 ವರ್ಷ ತುಂಬುವ ಯುವ ಮತದಾರರ ಹೆಸರು ಸೇರ್ಪಡೆ ಕುರಿತು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹಕ್ಕು ಮತ್ತು ಆಕ್ಷೇಪಣೆಗಳ ಅವಧಿಯಲ್ಲಿ ವಿಶೇಷ ಅಭಿಯಾನ ದಿನಾಂಕಗಳನ್ನು ನಿಗಧಿಪಡಿಸಲಾಗಿದೆ. ಸಾರ್ವಜನಿಕರು ವಿಶೇಷ ಅಭಿಯಾನಗಳ ಸೌಲಭ್ಯವನ್ನು ಬಳಸಿಕೊಳ್ಳುವಂತೆ ಹಾಗೂ ಅವಶ್ಯವಿರುವ ತಿದ್ದುಪಡಿ, ಸೇರ್ಪಡೆ ಹಾಗೂ ತೆಗೆದುಹಾಕುವಿಕೆಗಳಿಗೆ ಅರ್ಜಿಗಳನ್ನು ಸಲ್ಲಿಸುವಂತೆ ಮುಖ್ಯ ಚುನಾವಣಾಧಿಕಾರಿಗಳು ಮತದಾರರಲ್ಲಿ ಮನವಿ ಮಾಡಿದ್ದಾರೆ. ಸಾರ್ವಜನಿಕರು ಅರ್ಜಿ ನಮೂನೆ 6 ಮತ್ತು8 ಗಳನ್ನು ಸಲ್ಲಿಸುವಾಗ ಸ್ವಯಂಪ್ರೇರಿತವಾಗಿ ಆಧಾರ್ ಸಂಖ್ಯೆಗಳನ್ನು ಒದಗಿಸಬಹುದಾಗಿದೆ. ಎಲ್ಲಾ ರೀತಿಯ ಚುಣಾವಣಾ ಸಂಬಂಧಿತ ಸೇವೆಗಳಿಗಾಗಿ ಸಾರ್ವಜನಿಕರು ತಮ್ಮ ಮೊಬೈಲ್ ಫೋನ್ನಲ್ಲಿ Voter Helpline application ಮೂಲಕ ನೇರವಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. 20 ಆಗಸ್ಟ್ 2024 (ಮಂಗಳವಾರ) ರಿಂದ 18 ಅಕ್ಟೋಬರ್ 2024 (ಶುಕ್ರವಾರ) ರ ವರೆಗೆ ಮತಗಟ್ಟೆ ಮಟ್ಟದ ಅಧಿಕಾರಿಗಳಿಂದ ಮನೆ ಮನೆ ಭೇಟಿ ಮತ್ತು ಪರಿಶೀಲನೆ ನಡೆಸಲಿದ್ದಾರೆ. ಈ ಸಂದರ್ಭದಲ್ಲಿ ಮತಗಟ್ಟೆಗಳ ತರ್ಕಬದ್ಧಗೊಳಿಸುವಿಕೆ, ಮರು ಹೊಂದಾಣಿಕೆ ಸೇರಿದಂತೆ ಮತದಾರರ ಪಟ್ಟಿ, ಮತದಾರರ ಗುರುತಿನ ಚೀಟಿಗಳಲ್ಲಿನ ಲೋಪದೋಷಗಳನ್ನು ತೆಗೆದುಹಾಕುವುದು. ಅಗತ್ಯವಿರುವ ಕಡೆ ಮತದಾರರ ಪಟ್ಟಿಯಲ್ಲಿನ ಗುಣಮಟ್ಟವಿಲ್ಲದ ಭಾವಚಿತ್ರಗಳನ್ನು ಬದಲಾಯಿಸಿ ಉತ್ತಮ ಗುಣಮಟ್ಟದ ಭಾವಚಿತ್ರಗಳನ್ನು ಖಾತ್ರಿಪಡಿಸುವುದು. ವಿಭಾಗ/ಭಾಗಗಳ ಮರುಹೊಂದಾಣಿಕೆ ಹಾಗೂ ಪ್ರಸ್ತಾಪಿತ ವಿಭಾಗ, ಭಾಗಗಳ ಮತಗಟ್ಟೆಗಳ ಸ್ಥಳವನ್ನು ಅಂತಿಮಗೊಳಿಸುವಿಕೆ ಮತ್ತು ಮತಗಟ್ಟೆಗಳ ಪಟ್ಟಿಗಳಿಗೆ ಅನುಮೋದನೆ ಪಡೆದುಕೊಳ್ಳುವುದು. ನ್ಯೂನತೆಗಳ ಗುರುತಿಸುವಿಕೆ ಮತ್ತು ಅಂತಹ ನ್ಯೂನತೆಗಳನ್ನು ನಿವಾರಿಸಲು ಕಾರ್ಯತಂತ್ರ ಮತ್ತು ಕಾಲಾವಧಿಯನ್ನುಅಂತಿಮಗೊಳಿಸುವುದು ಮತ್ತು ನಿಯಂತ್ರಣ ಕೋಷ್ಟಕದ (Control Table) ನವೀಕರಣ ನಡೆಯಲಿದೆ. 19 ಅಕ್ಟೋಬರ್ 2024 (ಶನಿವಾರ) ರಿಂದ 28 ಅಕ್ಟೋಬರ್ 2024 (ಸೋಮವಾರ) ರ ವರೆಗೆ ನಮೂನೆ 1 ರಿಂದ 8 ರ ತಯಾರಿ ಹಾಗೂ ಅರ್ಹತಾ ದಿನಾಂಕ 01.01.2025 ರಂತೆ ಸಮಗ್ರ ಕರಡು ಮತದಾರರ ಪಟ್ಟಿಯನ್ನು ಸಿದ್ಧಪಡಿಸಲಾಗುವುದು. 29.10.2024 ರಂದು (ಮಂಗಳವಾರ) ಸಮಗ್ರ ಕರಡು ಮತದಾರರ ಪಟ್ಟಿಯ ಪ್ರಕಟಣೆ, ಸಾರ್ವಜನಿಕರು ತಮ್ಮ ಲೋಪದೋಷಗಳ ಕುರಿತಾಗಿ 29.10.2024 (ಮಂಗಳವಾರ) ರಿಂದ 28.11.2024 (ಗುರುವಾರ) ರ ವರೆಗೆ ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಕಾಶ ಇರುತ್ತದೆ. ಹಕ್ಕುಗಳು ಮತ್ತು ಆಕ್ಷೇಪಣೆಯ ಅವಧಿಯಲ್ಲಿ ಮುಖ್ಯ ಚುನಾವನಾಧಿಕಾರಿಗಳು ನಿಗಧಿಪಡಿಸುವ ಶನಿವಾರ ಮತ್ತು ಭಾನುವಾರಗಳಂದು ವಿಶೇಷ ಅಭಿಯಾನದ ದಿನಾಂಕಗಳನ್ನು ಶೀಘ್ರದಲ್ಲಿ ಗೊತ್ತುಪಡಿಸಲಾಗುವುದು.ಹಕ್ಕುಗಳು ಮತ್ತು ಆಕ್ಷೇಪಣೆಗಳ ವಿಲೇವಾರಿಯನ್ನು ದಿನಾಂಕ 24.12.2024 ರೊಳಗೆ (ಮಂಗಳವಾರ) ಮುಗಿಸಲಾಗುವುದು. 01.01.2025 ರೊಳಗೆ (ಬುಧವಾರ) ಮತದಾರರ ಪಟ್ಟಿಗಳ ಗುಣಮಟ್ಟ ಪರಿಶೀಲನೆ ಮಾಡುವುದು ಹಾಗೂ ಅಂತಿಮ ಪ್ರಕಟಣೆಗಾಗಿ ಆಯೋಗದ ಅನುಮತಿಯನ್ನು ಪಡೆಯುವುದು, ದತ್ತಾಂಶವನ್ನು ನವೀಕರಿಸುವುದು ಮತ್ತು ಪೂರಕಗಳ ಮುದ್ರಣ ಮಾಡಲಾಗುವುದು. 06.01.2025 ರಂದು (ಸೋಮವಾರ) ಮತದಾರರ ಪಟ್ಟಿಗಳ ಅಂತಿಮ ಪ್ರಕಟಣೆ ಮಾಡಲಾಗುವುದು ಎಂದು ಮುಖ್ಯ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿಎಂ ಬೆನ್ನಿಗೆ ನಿಂತ ಮಠಾಧೀಶರ ಒಕ್ಕೂಟ

» **ಮೊದಲ ಪುಟದಿಂದ**

ಅದಕ್ಕೆ ಮುಖ್ಯಮಂತ್ರಿಗಳು ವಕೀಲ ಪದವೀಧರರಾಗಿ ಸಹಕಾರ ನೀಡುತ್ತಾರೆ. ಆದರೆ, ಕರ್ನಾಟಕದಲ್ಲಿ ಅಪರೂಪಕ್ಕೊಮ್ಮೆ ಅಹಿಂದ ವರ್ಗದ ವ್ಯಕ್ತಿ ಮುಖ್ಯಮಂತ್ರಿಯಾಗುತ್ತಾರೆ. ಇಂತಹ ಕ್ಲಿಷ್ಟಕರ ಸಂದರ್ಭದಲ್ಲಿ ಸಿದ್ದರಾಮಯ್ಯನವರು ಮುಖ್ಯಮಂತ್ರಿಗಳಾಗಿ ಮುಂದುವರೆಸಬೇಕೆಂಬುದು ಕರುನಾಡಿನ ಬಹುಸಂಖ್ಯಾತರ ಬಯಕೆಯಾಗಿದೆ.

# ಇಂದಿನಿಂದ ಆರಾಧನಾ ಪಂಚರಾತ್ರೋತ್ಸವ

» **ಚಿತ್ರದುರ್ಗ**

ಶ್ರೀ ಗುರುಸಾರ್ವಭೌಮರು ಮಂತ್ರಾಲಯ ಮಹಾಕ್ಷೇತ್ರದಲ್ಲಿ ಸಶರೀರರಾಗಿ ಬೃಂದಾವನ ಪ್ರವೇಶ ಮಾಡಿದ ಸ್ಮರಣಾರ್ಥವಾಗಿ ಆಚರಿಸುವ 353ನೇ ಆರಾಧನಾ ಪಂಚರಾತ್ರೋತ್ಸವ ಆ. 20ರಿಂದ 22 ರವರೆಗೆ ಈ ಮೂರು ದಿನಗಳಲ್ಲಿ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ನಗರದ ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠದಲ್ಲಿ ನಡೆಸಲು ಸಂಕಲ್ಪಿಸಲಾಗಿದ್ದು, ಇದರ ಅಂಗವಾಗಿ ಸೋಮವಾರ ಸಂಜೆ ಧ್ವಜಾರೋಹಣ, ಗೋಪೂಜೆ, ಧನ–ಧಾನ್ಯ ಪೂಜೆ, ಲಕ್ಷ್ಮೀ ಪೂಜೆ, ಸ್ವಸ್ತಿ ವಾಚನ, ಮಹಾಮಂಗಳಾರತಿ ಕಾರ್ಯಕ್ರಮವನ್ನು ನಡೆಸಲಾಯಿತು.

353ನೇ ಆರಾಧನಾ ಮಹೋತ್ಸವದ ಅಂಗವಾಗಿ ಇಂದು ಬೆಳಿಗ್ಗೆ ಋಗ್ವದ, ಯಜುರ್ವೇದ, ನಿತ್ಯ, ನೂತನ ಉಪಾಕರ್ಮ ಕಾರ್ಯಕ್ರಮ ನಡೆಸಲಾಯಿತು. ಸಂಜೆ ಧ್ವಜಾರೋಹಣ, ಗೋಪೂಜೆ, ಧನ–ಧಾನ್ಯ ಪೂಜೆ, ಲಕ್ಷ್ಮೀ ಪೂಜೆ, ಸ್ವಸ್ತಿ ವಾಚನ, ಮಹಾಮಂಗಳಾರತಿ ನಡೆಸಲಾಯಿತು. ಇದರಲ್ಲಿ ಮೂರು ದಿನಗಳ ನಡೆಯುವ ರಾಯರ ಆರಾಧನೆಗೆ ಅಗತ್ಯವಾಗಿ ಬೇಕಾದ ವಿವಿಧ ರೀತಿಯ ಧಾನ್ಯಗಳಾದ ಅಕ್ಕಿ,ಬೇಳೆ,ಬೆಲ್ಲ,ಎಣ್ಣೆ, ತರಕಾರಿಗಳು ಸೊಪ್ಪು, ರಾಯರಿಗೆ ಉಡಿಸುವ ಪಂಚೆ, ಬಾಳೆಹಣ್ಣು, ಸೇಬು, ತೆಂಗಿನ ಕಾಯಿ, ಎಳೆ ನೀರು, ಸೇಬು, ದಾಳಿಂಬೆ ಮೋಸುಂಬೆ, ಕಲ್ಲಂಗಡಿ, ಹಣಸೇಹಣ್ಣು, ದೀಪದ ಬತ್ತಿಗಳನ್ನು ಪೂಜೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬ್ರಾಹ್ಮಣ ಸಂಘ(ರಿ) ದ ಅಧ್ಯಕ್ಷರಾದ ಪಿ.ಎಸ್.ಮಂಜುನಾಥ್, ಕಾರ್ಯದರ್ಶಿ ದೀಪಾನಂದ ಉಪಾಧ್ಯ ಮತ್ತು ಸಹೋದರರು ಶ್ರೀಗುರುರಾಯಸೇವಾ ಸಂಘದ ಅಧ್ಯಕ್ಷರಾದ ವೇದವ್ಯಾಸಾಚಾರ್, ಶ್ರೀ ಹರಿವಾಯು ಗುರು ಸೇವಾ ಟ್ರಸ್ಟ್‌ನ ಅಧ್ಯಕ್ಷರಾದ ಟಿ.ಕೆ. ನಾಗರಾಜ್‌ರಾವ್ ಭಾಗವಹಿಸಿದ್ದರು.



ಆ. 20ರ ಮಂಗಳವಾರ ಶ್ರೀ ಗುರುಸಾರ್ವಭೌಮರ ಪೂರ್ವಾರಾಧನೆ ಆ. 21ನೇ ಬುಧವಾರ ಶ್ರೀ ಗುರುಸಾರ್ವ ಭೌಮರ ಮಧ್ಯಾರಾಧನೆ ಆ. 22ನೇ ಗುರುವಾರ ಶ್ರೀ ಗುರುಸಾರ್ವಭೌಮರ ಉತ್ತರಾರಾಧನೆ ಪ್ರಾತ: 10 ಗಂಟೆಗೆ ಶ್ರೀ ಗುರುಸಾರ್ವಭೌಮರ ಉತ್ತರಾರಾಧನೆ ಪ್ರಯುಕ್ತ ಮಹಾರಥೋತ್ಸವವು ಚಿತ್ರದುರ್ಗದ ರಾಜಬೀದಿ ಗಳಲ್ಲಿ ವಿವಿಧ ಭಜನಾಮಂಡಳಿಗಳು ಹಾಗೂ ಶ್ರೀ ಗುರುಸಾರ್ವಭೌಮರ ಭಕ್ತರೊಂದಿಗೆ ಜರುಗುವುದು. ಆ 23 ನೇ ಶುಕ್ರವಾರ ಶ್ರೀ ಸುಜ್ಞಾನೇಂದ್ರತೀರ್ಥರ ಆರಾಧನೆ, ಪವಮಾನ ಹೋಮ,ಸರ್ವಸಮರ್ಪಣೋತ್ಸವ ಕಾರ್ಯಕ್ರಮ ನಡೆಯಲಿದೆ.

ಆರಾಧನಾ ದಿನತ್ರಯಗಳಲ್ಲಿ ಬೆಳಿಗ್ಗೆ 05.30ಕ್ಕೆ ಬೆಳಿಗ್ಗೆ 07.30ಕ್ಕೆ : ನಿರ್ಮಾಲ್ಯ ಅಷ್ಟೋತ್ತರ ಸಹಿತ ಫಲಪಂಚಾಮೃತ ಅಭಿಷೇಕ ಬೆಳಿಗ್ಗೆ 09.30ಕ್ಕೆ : ಉತ್ಸವರಾಯರ ಪಾದಪೂಜೆ, ಕನಕಾಭಿಷೇಕ ಬೆಳಿಗ್ಗೆ 12.00ಕ್ಕೆ : ನೈವೇದ್ಯ, ಅಲಂಕಾರ ಪಂಕ್ತಿ, ಹಸ್ತೋದಕ, ಮಹಾಮಂಗಳಾರತಿ, ತೀರ್ಥಪ್ರಸಾದ ಬೆಳಿಗ್ಗೆ 11.00 ರಿಂದ : ಭಜನಾ ಕಾರ್ಯಕ್ರಮ ಸಂಜೆ 05.30 ರಿಂದ 07.30ವರೆಗೆ : ಸಾಂಸ್ಕೃತಿಕ ಕಾರ್ಯಕ್ರಮ ಸಂಜೆ 07.30 ರಿಂದ 09.00ವರೆಗೆ : ರಜತ ರಥೋತ್ಸವ, ಸ್ವಸ್ತಿವಾಚನ, ಅಷ್ಟಾವಧಾನ, ಮಹಾಮಂಗಳಾರತಿ. ಮಹಾ ಅನ್ನಸಂತರ್ಪಣೆ (ರಾಯರ ಮಹಾಪ್ರಸಾದ) ವಿತರಿಸಲಾಗುವುದು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಆ. 20 ರಂದು ಬೆಳಿಗ್ಗೆ 11.00 ರಿಂದ ಭಜನೆ – ಶ್ರೀ ಪಾಂಡುರಂಗ ಭಜನಾ ಮಂಡಳಿ ಸಂಜೆ 5.30 ರಿಂದ 7.30 ರವರೆಗೆ ಭರತನಾಟ್ಯ ಕಾರ್ಯಕ್ರಮ ನಾಟ್ಯಶ್ರೀ ಭರತನಾಟ್ಯ ಶಾಲೆ, ಬೆಂಗಳೂರು ಇವರಿಂದ ಆ. 21 ನೇ ಬುಧವಾರ ಬೆಳಿಗ್ಗೆ 11.00 ರಿಂದ ಭಜನೆ – ಶ್ರೀ ಸಪ್ತಗಿರಿ ಭಜನಾ ಮಂಡಳಿಯವರಿಂದ ಸಾಯಂಕಾಲ 5.30 ರಿಂದ 7.30 ರವರೆಗೆ ದಾಸವಾಣಿ ಕಾರ್ಯಕ್ರಮ (ಹಿಂದುಸ್ತಾನಿ) ಶ್ರೀ ಸುಜೀತ್ ಕುಲಕರ್ಣಿ ಇವರಿಂದ ಆ. 22 ನೇ ಗುರುವಾರ ಸಾಯಂಕಾಲ 5.30 ರಿಂದ ಶ್ರೀ ರಾಘವೇಂದ್ರ ಸ್ವಾಮಿಗಳವರ ಸ್ಮರಣೆ ರೂಪಕ, ಚಿತ್ರದುರ್ಗದ ಶ್ರೀ ಗುರುರಾಜರ ಭಕ್ತರಿಂದ ಆ 23 ನೇ ಶುಕ್ರವಾರ ಬೆಳಿಗ್ಗೆ 11.00 ರಿಂದ ಭಜನೆ ಶ್ರೀ ಬ್ರಹ್ಮಚೈತನ್ಯ ಮಹಿಳಾ ಭಜನಾ ಮಂಡಳಿಯವರಿಂದ ಸಂಜೆ 5.30 ರಿಂದ 7.30ರವರೆಗೆ ಚಂಪಕ ಶ್ರೀಧರ್ ಮತ್ತು ಶಿಷ್ಯವೃಂದದವರಿಂದ ಕರ್ನಾಟಕ ಸಂಗೀತ ಕಾರ್ಯಕ್ರಮ ನಡೆಯಲಿದೆ.

ಶ್ರೀ ಗುರುರಾಜರ ಆರಾಧನಾ ವೈಭವವನ್ನು ಕಂಡು ಭಕ್ತರು ಕಣ್ಮನ ತುಂಬಿಕೊಳ್ಳಬಹುದಾಗಿದೆ. ಕಾರಣ ಆಸ್ತಿಕ ಸಜ್ಜನರು ಈ ಮೂರು ದಿವಸಗಳ ಕಾಲ ಶ್ರೀಮಠಕ್ಕೆ ಆಗಮಿಸಿ ಶ್ರೀ ಗುರುರಾಜರ ದರ್ಶನ, ಸೇವಾ ಸೌಭಾಗ್ಯವನ್ನು ಪಡೆದು ಆರಾಧನಾ ಮಹೋತ್ಸವದಲ್ಲಿ ಭಾಗವಹಿಸುವಂತೆ ಭಕ್ತರಲ್ಲಿ ಮನವಿ ಮಾಡಲಾಗಿದೆ.



**ಚಳ್ಳಕೆರೆ ನಗರದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಚೇರಿಯಲ್ಲಿ ವಿದ್ಯಾರ್ಥಿಗಳಿಗೆ ಸುಜ್ಞಾನನಿಧಿ ಶಿಷ್ಯ ವೇತನ ಹಾಗೂ ವಿದ್ಯಾಭ್ಯಾಸವನ್ನು ಪೂರೈಸಿದ ವಿದ್ಯಾರ್ಥಿಗಳಿಗೆ ಪ್ರಮಾಣವನ್ನು ಪತ್ರವನ್ನು ವಿತರಿಸಲಾಯಿತು.**

# ಪಾರ್ಶ್ವನಾಥ ಶಾಲೆಯಲ್ಲಿ ಮಕ್ಕಳಿಗಾಗಿ ರಕ್ಷಾ ಬಂಧನ



» **ಚಿತ್ರದುರ್ಗ**

ನಗರದ ಪಾರ್ಶ್ವನಾಥ ವಿದ್ಯಾ ಸಂಸ್ಥೆಯ ಆಡಿಯಲ್ಲಿ ಸೋಮವಾರ ರಕ್ಷಾ ಬಂಧನ ಕಾರ್ಯಕ್ರಮವನ್ನು ಶಾಲಾ ಮಕ್ಕಳಿಗಾಗಿ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಪಾರ್ಶ್ವನಾಥ ವಿದ್ಯಾ ಸಂಸ್ಥೆಯ ಉಪಾಧ್ಯಕ್ಷರಾದ ಉತ್ತಮಚಂದ್ ಸುರಾನ ಮಾತನಾಡಿ, ಸೋದರತ್ವದ ಭಾಂದವ್ಯ ಸಾರುವ ಹಬ್ಬವೇ ರಕ್ಷಾ ಬಂಧನವಾಗಿದೆ ಅಣ್ಣ–ತಂಗಿಯವ ಮಧ್ಯೆ ಪ್ರೀತಿಯನ್ನು ಮೂಡಿಸುವ ಹಬ್ಬವಾಗಿ ರಾಖಿ ಹಬ್ಬ ದ್ವಾಪರಯುಗದಿಂದಲೂ ಸಹಾ ಆಚರಣೆಯಲ್ಲಿ ಇದೆ ನಮ್ಮ ಶಾಲೆಯಲ್ಲಿ ಈ ಹಬ್ಬವನ್ನು ಆಚರಣೆ ಮಾಡುವುದರ ಮೂಲಕ ಶಾಲೆಯಲ್ಲಿ ಅಭ್ಯಾಸವನ್ನು ಮಾಡುವ ಮಕ್ಕಳಲ್ಲಿ ಸಹೋದರ ಭಾವನೆಯನ್ನು ಮೂಡಿಸುವ ವಾತಾವರಣವನ್ನು ನಿರ್ಮಾಣ ಮಾಡಲಾಗುವುದು ಎಂದರು. ಸೋದರಿಗೆ ರಕ್ಷಣೆಯ ಭರವಸೆಯನ್ನು ನೀಡುವ ಸೋದರತೆಯನ್ನು ಸಾರುವ ರಕ್ಷಾ ಬಂಧನಕ್ಕೆ ಶತಮಾನಗಳ ಇತಿಹಾಸ ಇದೆ, ಪೌರಾಣಿಕ ಹಿನ್ನಲೆಯನ್ನು ಸಹಾ ಹೊಂದಿದೆ. ರಕ್ಷಾ ಬಂಧನ ಎನ್ನುವುದು ಪವಿತ್ರವಾದ ಸಂಸ್ಕೃತ ಪದವಾಗಿದೆ. ರಕ್ಷಣೆಯ ಬಂಧ ಎಂದು ಇದರ ಅರ್ಥ, ರಕ್ಷಾ ಬಂಧನದಲ್ಲಿ ಸಹೋದರಿಯರು ತಮ್ಮ ಸಹೋದರರಿಗೆ ಏಳ್ಗೆಯನ್ನು ಬಯಸುತ್ತಾರೆ. ಭಗವಂತ ಇವರಿಗೆ ಧೀರ್ಘಾಯಷ್ಯಕ್ಕಾಗಿ ವ್ರತವನ್ನು ಆಚರಣೆ ಮಾಡುತ್ತಾ ಸಹೋದರನ ಮಣಿ ಕೈಗೆ ರಕ್ಷಾ ದಾರವನ್ನು ಕಟ್ಟುತ್ತಾರೆ. ಇದರ ಮೂಲಕ ಸಹೋದರನಿಂದ ರಕ್ಷಣೆಯನ್ನು ಭರವಸೆಯನ್ನು ಪಡೆಯುತ್ತಾರೆ. ಇದರೊಂದಿಗೆ ಸಹೋದರಿಯನ್ನು ರಕ್ಷಿಸುವ ಜವಾಬ್ದಾರಿಯನ್ನು ನೀಡುತ್ತಾನಲ್ಲದೆ ಸಹೋದರ–ಸಹೋದರಿಯ ನಡುವಿನ ಸಂಬಂಧ ಬಲವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಸಹಾ ಕಾರ್ಯದರ್ಶಿ ಸುರೇಶ್ ಮುತ್ತ, ಖಂಜಾಚಿ ರಾಜೇಂದ್ರ ದಲೇಷಾ, ಮುಖ್ಯ ಶಿಕ್ಷಕಿಯಾದ ನಾಜಿಮಾ ಶಾಂತಕುಮಾರಿ ಹಾಗೂ ಶಿಕ್ಷಕಿಯರು ಭಾಗವಹಿಸಿದ್ದರು, ತದ ನಂತರ ಮಕ್ಕಳಿಂದ ರಕ್ಷಾ ಬಂಧನ ಕುರಿತಾ ನೃತ್ಯ ಪ್ರದರ್ಶನವಾಯಿತು.

**ಪ್ರಮುಖ ಸುದ್ದಿ**

# ವೈದ್ಯೆ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಎಐಡಿವೈಓ ಖಂಡನೆ

» **ಚಿತ್ರದುರ್ಗ**

ಕೊಲ್ಕತ್ತಾದ ಆರ್.ಜಿ.ಕರ್ ವೈದ್ಯಕೀಯ ಕಾಲೇಜಿನ ಸ್ನಾತಕೋತ್ತರ ವೈದ್ಯೆಯ ಮೇಲಿನ ಅತ್ಯಾಚಾರ, ಕೊಲೆ ಹಾಗೂ ಪ್ರತಿಭಟನಾಕಾರರ ಮೇಲಿನ ದಾಳಿಯ ಕುರಿತು ತುರ್ತು ಕ್ರಮ ಕೈಗೊಳ್ಳುವಂತೆ ರಾಷ್ಟ್ರಪತಿಗಳಿಗೆ ಅಪರ ಜಿಲ್ಲಾಧಿಕಾರಿಗಳ ಮೂಲಕ ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ(ಎಐಎಂಎಸ್‌ಎಸ್) ಅಖಿಲ ಭಾರತ ಪ್ರಜಾಸತ್ತಾತ್ಮಕ ಯುವ ಜನ ಸಂಘಟನೆ(ಎಐಡಿವೈಓ) ಚಿತ್ರದುರ್ಗ ಜಿಲ್ಲಾ ಸಮಿತಿಯಿಂದ ಮನವಿ ಸಲ್ಲಿಸಲಾಯಿತು.

ಕೊಲ್ಕತ್ತಾದ ಆರ್‌ಜಿಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ತರಬೇತಿ ನಿರತ ಮಹಿಳಾ ವೈದ್ಯೆಯ ಮೇಲಿನ ಅತ್ಯಾಚಾರ ಮತ್ತು ಹತ್ಯೆಯ ಘಟನೆಯು ಇಡೀ ದೇಶವನ್ನೇ ಬೆಚ್ಚಿ ಬೀಳಿಸಿದೆ. ಈ ಪೈಶಾಚಿಕ ಅತ್ಯಾಚಾರ, ಕೊಲೆಹಾಗೂ ಪ್ರತಿಭಟನಾಕಾರರ ಮೇಲಿನ ದಾಳಿಯನ್ನು ಎಐಎಂಎಸ್‌ಎಸ್ ಮತ್ತು ಎಐಡಿವೈಓ ಚಿತ್ರದುರ್ಗ ಜಿಲ್ಲಾ ಘಟಕಗಳು ಅತ್ಯುಗ್ರವಾಗಿ ಖಂಡಿಸುತ್ತವೆ.




ಆಗಸ್ಟ್ 08 ರಂದು ರಾತ್ರಿ ಪಾಳಿಯಲ್ಲಿ ಕೆಲಸದಲ್ಲಿದ್ದ 32 ವರ್ಷದ ಟ್ರೈನಿ ವೈದ್ಯೆಯ ಮೃತ ದೇಹವು ಶುಕ್ರವಾರ ಬೆಳಗ್ಗೆ ಕಾಲೇಜಿನ ಮೂರನೇ ಮಹಡಿಯ ಸೆಮಿನಾರ್ ಹಾಲಿನಲ್ಲಿ ಅರೆಬೆತ್ತಲೆ ಸ್ಥಿತಿಯಲ್ಲಿ ಪತ್ತೆಯಾಗಿದೆ. ಇದು ದೇಶದ ನಾಗರಿಕರಲ್ಲಿ ತೀವ್ರವಾದ ಆತಂಕ, ಗಾಬರಿ ಮತ್ತು ಆಘಾತವನ್ನುಉಂಟು ಮಾಡಿದೆ. ಜನರ ಜೀವವನ್ನು ರಕ್ಷಿಸಬೇಕಾದ ವೈದ್ಯರಿಗೇ ರಕ್ಷಣೆ ಇಲ್ಲದಂತಾಗಿರುವುದು ಅತ್ಯಂತ ಹೇಯಕೃತ್ಯವಾಗಿದೆ. ಅಲ್ಲದೆ ದೇಶದಾದ್ಯಂತ ಜನರು ಈಘಟನೆಯನ್ನು ಖಂಡಿಸಿ ಹಾಗೂ ಮಹಿಳೆಯರ ಮೇಲೆ ಹೆಚ್ಚುತ್ತಿರುವ ಅಪರಾಧಗಳ ವಿರುದ್ಧ ಬೀದಿಗಿಳಿದು ಪ್ರತಿಭಟಿಸುತ್ತಿದ್ದಾರೆ. ಕೆಲಸದ ಸ್ಥಳಗಳಲ್ಲಿ ಮಹಿಳೆಯ ಸುರಕ್ಷತೆಯ ಬಗ್ಗೆ ಜನರು ಚರ್ಚಿಸುವಂತಾಗಿದೆ. ವೈದ್ಯ ವಿದ್ಯಾರ್ಥಿನಿಯ ಮೇಲಾದ ಕೃತ್ಯದ ವಿರುದ್ಧ ನ್ಯಾಯಕ್ಕಾಗಿ ಪ್ರತಿಭಟಿಸುತ್ತಿದ್ದವರ ಮೇಲೆ ಏಕಾಏಕಿ ಸಮಾಜಘಾತುಕ ಶಕ್ತಿಗಳು ದಾಳಿ ಮಾಡಿದ್ದಾರೆ. ಸಾಕ್ಷ್ಯವನ್ನು ನಾಶಪಡಿಸುವ ಮತ್ತು ತನಿಖೆಗೆ ಅಡ್ಡಿಪಡಿಸುವ ಉದ್ದೇಶದಿಂದ ಮತ್ತು ಪ್ರತಿಭಟನಾಕಾರರ ಮನಸ್ಸಿನಲ್ಲಿ ಭಯದ ಭಾವನೆಯನ್ನು ಹುಟ್ಟಿಸಲು ಮಧ್ಯರಾತ್ರಿ ಆರ್‌ಜಿಕರ್ ವೈದ್ಯಕೀಯ ಕಾಲೇಜಿಗೆ ನುಗ್ಗಿ ಪ್ರತಿಭಟನೆಯ ಸ್ಥಳವನ್ನು ಧ್ವಂಸಗೊಳಿಸಿದ್ದಾರೆ.

ಈ ಕೃತ್ಯ ಎಸಗಿರುವ ಅಪರಾಧಿಗಳನ್ನು ರಕ್ಷಿಸಲು ಗೂಂಡಾಗಳು ನಡೆಸಿರುವ ಈ ಉದ್ದೇಶಪೂರ್ವಕ ಮತ್ತು ವ್ಯವಸ್ಥಿತ ದಾಳಿಯನ್ನು ಖಂಡಿಸಿದ್ದು ಆಸ್ಪತ್ರೆಯ ಅಧಿಕಾರಿಗಳು ಸಹ ಈ ಘಟನೆಗೆ ತಕ್ಷಣ ಪ್ರತಿಕ್ರಿಯಿಸಿಲ್ಲ. ಬದಲಾಗಿ ಅಪರಾಧಿಗಳೊಂದಿಗೆ ಶಾಮೀಲಾಗಿದ್ದು ಅವರನ್ನು ರಕ್ಷಿಸಲು ಪ್ರಯತ್ನಿಸುತ್ತಿರುವಂತೆ ಕಾಣುತ್ತಿದೆ. ಗೂಂಡಾಗಳ ಇಂತಹ ಕೃತ್ಯಗಳು ಅಪರಾಧ ಎಸಗಿದವರಿಗೆ ಮಾತ್ರ ಸಹಾಯ ಮಾಡುತ್ತವೆ ಮತ್ತು ನಿಜವಾದ ಪ್ರತಿಭಟನಾಕಾರರನ್ನು ಸಮಾಜ ವಿರೋಧಿಗಳೆಂದು ಬಿಂಬಿಸುವ ಮತ್ತು ಚಳವಳಿಯನ್ನು ಹತ್ತಿಕ್ಕುವ ಕೈಗಳನ್ನು ಬಲಪಡಿಸುತ್ತವೆ. ಆದ್ದರಿಂದ ತಾವುಗಳು ಈ ಕುರಿತು ಕೂಡಲೆ ಮಧ್ಯೆ ಪ್ರವೇಶಿಸಿ ಸಂತ್ರಸ್ತೆಗೆ ನ್ಯಾಯ ಸಿಗುವಂತಾಗಲು ತುರ್ತು ಕ್ರಮ ಕೈಗೊಳ್ಳಬೇಕೆಂದು ಎಐಎಂಎಸ್‌ಎಸ್ ಮತ್ತು ಎಐಡಿವೈಓ ಚಿತ್ರದುರ್ಗ ಜಿಲ್ಲಾ ಘಟಕಗಳು ಮನವಿ ಮಾಡಿವೆ.

ಈ ಸಂದರ್ಭದಲ್ಲಿ ಎಐಎಂಎಸ್‌ಎಸ್‌ನ ಜಿಲ್ಲಾ ಸಂಚಾಲಕರಾದ ಶ್ರೀಮತಿ ಸುಜಾತ, ಎಐಡಿವೈಓನ ಜಿಲ್ಲಾ ಮುಖಂಡರಾದ ಡಿ.ಕೆ. ಜಯ್ಯಣ್ಣ, ಕುಮುದ, ರವಿಕುಮಾರ್ ಉಪಸ್ಥಿತರಿದ್ದರು.




# ಭ್ರಷ್ಟಾಚಾರದ ವಿವಿಧ ಕಾರಣಗಳು ಮತ್ತು ಮುಖಗಳು..........

ಕಂಟ್ರಾಕ್ಟರ್ ಒಬ್ಬರ ಆತ್ಮಹತ್ಯೆ ಮತ್ತು 40% ಕಮೀಷನ್ ಬಗ್ಗೆ ಎಲ್ಲೆಡೆ ಚರ್ಚೆ ನಡೆಯುತ್ತಿರುವಾಗ ಭ್ರಷ್ಟಾಚಾರದ ಮೂಲಗಳನ್ನು ಹುಡುಕುವ ಜವಾಬ್ದಾರಿ ನಮ್ಮ ಮೇಲಿದೆ. ಇದನ್ನು ಪಕ್ಷಾತೀತವಾಗಿ ಅವಲೋಕನ ಮಾಡಬೇಕು. ಇಲ್ಲದಿದ್ದರೆ ತಪ್ಪುಗಳ ಪ್ರಮಾಣದ ಮೇಲೆ ಭ್ರಷ್ಟಾಚಾರಿಗಳು ತಮ್ಮ ತಪ್ಪುಗಳನ್ನು ಸಮರ್ಥಿಸಿಕೊಂಡು ನಿರಂತರ ವಂಚಕರಾಗುತ್ತಾರೆ. ಮಾಧ್ಯಮಗಳು ಅವರಿಗೆ ಅನುಕೂಲಕರ ವೇದಿಕೆಯನ್ನು ಸೃಷ್ಟಿಸುತ್ತಾರೆ.........

ಮೊದಲನೆಯದಾಗಿ, ಕಾನೂನುಗಳ ಸಂಕೀರ್ಣತೆ ಭ್ರಷ್ಟಾಚಾರ ಹೆಚ್ಚಾಗಲು ಒಂದು ಪ್ರಮುಖ ಕಾರಣ. ಜನರನ್ನು ನಂಬದ ಅಧಿಕಾರಿಗಳು, ಅಧಿಕಾರಿಗಳನ್ನು ನಂಬದ ಜನರು ಒಟ್ಟು ಅನುಮಾನ ಪ್ರವೃತ್ತಿಯ ಸ್ವಾರ್ಥ ವ್ಯವಸ್ಥೆಯೇ ಕೆಟ್ಟ ಹಣದ ಹರಿವು ಹೆಚ್ಚಾಗಲು ಒಂದು ಸಾಧನವಾಗಿದೆ. ಅಧಿಕಾರಿಗಳ ಮತ್ತು ರಾಜಕಾರಣಿಗಳ ಶ್ರೇಣೀಕೃತ ಅಧಿಕಾರದ ಹಂಚಿಕೆ, ನಿಯಮಗಳ ಒಳಮರ್ಮವನ್ನು ತಮ್ಮ ಹಣದಾಹಕ್ಕೆ ಬಳಸಿಕೊಳ್ಳುವ ತಂತ್ರಗಾರಿಕೆ ಭ್ರಷ್ಟಾಚಾರ ಸಾರ್ವತ್ರಿಕವಾಗಲು ಕಾರಣವಾಗಿದೆ...

ಎರಡನೆಯದಾಗಿ, ದುಡಿದ ಹಣಕ್ಕಿಂತ ಭ್ರಷ್ಟ ಹಣ ಹೆಚ್ಚು ಸುಲಭವಾಗಿ ಸಿಗುತ್ತದೆ ಮತ್ತು ಆ ಹಣದಿಂದ ನಮ್ಮ ಐಹಿಕ ಸುಖ ಭೋಗಗಳನ್ನು ಸಂತೃಪ್ತಿ ಗೊಳಿಸಿಕೊಳ್ಳಬಹುದು ಎಂಬ ಅಭಿಪ್ರಾಯ ಈ ಆಧುನಿಕ ಕಾಲದಲ್ಲಿ ಬಲವಾಗಿ ಬೇರೂರಿದೆ. ಹಣದಿಂದಲೇ ಚುನಾವಣೆ ಗೆದ್ದು ಅಧಿಕಾರ ಹಿಡಿಯಬಹುದು ಮತ್ತು ಅದರಿಂದ ಮತ್ತಷ್ಟು ಹಣ ಮಾಡಿ ಅದೇ ಅಧಿಕಾರವನ್ನು ಉಳಿಸಿಕೊಳ್ಳಬಹುದು, ಸರ್ಕಾರಿ ಅಧಿಕಾರಿಗಳು ಸಂಬಳದಿಂದ ಸಾಧಿಸಲು ಸಾಧ್ಯವಾಗದ ಭವ್ಯ ಬಂಗಲೆ ಕಾರು ವಿದೇಶ ಪ್ರವಾಸ ತೋಟದ ಮನೆ ಅನುಕೂಲಕರ ವರ್ಗಾವಣೆ ಎಲ್ಲವೂ ಭ್ರಷ್ಟ ಹಣದಿಂದ ಪಡೆಯಬಹುದು ಎಂಬುದು ಹೆಚ್ಚು ವಾಸ್ತವವಾಗಿದೆ. ಅದಕ್ಕಾಗಿಯೇ ಹೆಚ್ಚು ಹೆಚ್ಚು ಹಣ ಮಾಡಲು ಯಾವುದೇ ದಾರಿಯನ್ನು ಕಂಡುಕೊಳ್ಳುತ್ತಾರೆ......

ಮೂರನೆಯದಾಗಿ, ಸಮಾಜದಲ್ಲಿ ಕುಸಿಯುತ್ತಿರುವ ಮಾನವೀಯ ಮೌಲ್ಯಗಳು, ಹೆಚ್ಚುತ್ತಿರುವ ಕೊಳ್ಳುಬಾಕ ಸಂಸ್ಕೃತಿ, ಹಣದಿಂದಲೇ ನಿರ್ಧಾರವಾಗುವ ನಮ್ಮ ಗೌರವ ಸ್ಥಾನಮಾನ, ಸಂಬಂಧಗಳು, ಆರೋಗ್ಯ ಶಿಕ್ಷಣ ಮುಂತಾದ ಸೇವೆಗಳು, ಕೊನೆಗೆ ದೇವರ ದರ್ಶನವನ್ನು ಸಹ ಹಣದಿಂದಲೇ ಮಾಡಬಹುದು ( ಪೂಜೆ ಪ್ರಾರ್ಥನೆ ಹೋಮ ಹವನ ) ಎಂಬ ಕಾರಣದಿಂದ ಜನರು ಹಣ ಮಾಡಲು ಭ್ರಷ್ಟ ಮಾರ್ಗಗಳನ್ನು ಹುಡುಕತೊಡಗಿದರು. ಅದು ಊಹೆಗೂ ನಿಲುಕದ ಹೊಸ ಹೊಸ ಆಯಾಮಗಳನ್ನು ಪಡೆಯಿತು. ಅದು ಎಷ್ಟೆಂದರೆ ಈಗ ಭ್ರಷ್ಟಾಚಾರದ ಮೂಲ ಹುಡುಕುವುದೇ ಸಾಧ್ಯವಿಲ್ಲ ಎನ್ನುವಂತಾಗಿದೆ......



ನಾಲ್ಕನೆಯದಾಗಿ ಮತ್ತು ಬಹುಮುಖ್ಯವಾಗಿ ಭಾರತೀಯ ಸಮಾಜದ ಜಾತಿ ವ್ಯವಸ್ಥೆ ಭ್ರಷ್ಟಾಚಾರದ ಮೂಲವಾಗಿ ಬೇರು ಬಿಟ್ಟಿದೆ. ಹೇಳಿಕೇಳಿ ಇದು ಪ್ರಜಾಪ್ರಭುತ್ವ ವ್ಯವಸ್ಥೆ. ಇಲ್ಲಿ ಬಹುಮತವೇ ಅತ್ಯಂತ ಪ್ರಮುಖವಾದುದು. ಜಾತಿಯ ಅಭಿಮಾನ ಅಂಧಕಾರ ಮತದಾರರನ್ನು ಕುರುಡಾಗಿಸಿದೆ. ಈ ಜಾತಿ ಪದ್ದತಿ ಭ್ರಷ್ಟಾಚಾರವನ್ನು ಸಮೃದ್ಧವಾಗಿ ಪೋಷಿಸುತ್ತಿದೆ. ಸಂಖ್ಯೆಯ ಪ್ರಬಲ ಜಾತಿಗಳು ಅದಕ್ಕೆ ಪೂರಕ ಭ್ರಷ್ಟ ಹಣ ಒಟ್ಟು ವ್ಯವಸ್ಥೆಯನ್ನೇ ನಿಯಂತ್ರಿಸುತ್ತಿದೆ.....

ಭ್ರಷ್ಟಾಚಾರ ಕೇವಲ ಹಣ ಆಸ್ತಿ ಅಧಿಕಾರ ಎಂಬ ವಸ್ತು ರೂಪದಲ್ಲಿ ಮಾತ್ರ ಚಲಾವಣೆಯಲ್ಲಿಲ್ಲ. ಅದು ಮಾನಸಿಕವಾಗಿ ಕೂಡ ಕಾರ್ಯಾಚರಣೆಯಲ್ಲಿದೆ. ನಮ್ಮ ರಕ್ತ ಮೂಳೆ ಮಾಂಸ ಉಸಿರು ಹೃದಯ ಎಲ್ಲವನ್ನೂ ನಿಯಂತ್ರಿಸುವ ಮೆದುಳಿನಲ್ಲಿ ಭ್ರಷ್ಟಾಚಾರ ಅವಿತು ಕುಳಿತಿದೆ. ಅವಕಾಶ ಇಲ್ಲದಿದ್ದಾಗ ಅದು ಪ್ರಾಮಾಣಿಕ ಮುಖವಾಡ ತೊಡುತ್ತದೆ. ಒಮ್ಮೆ ಅವಕಾಶ ಸಿಕ್ಕರೆ ಎಲ್ಲಾ ಮೌಲ್ಯಗಳನ್ನು ಗಾಳಿಗೆ ತೂರಿ ರಾಕ್ಷಸ ರೂಪ ಪಡೆಯುತ್ತದೆ. ಎಲ್ಲಾ ಸಂಸ್ಕಾರ ಸಂಸ್ಕೃತಿಗಳನ್ನು ಆಪೋಶನ ತೆಗೆದುಕೊಳ್ಳುತ್ತದೆ. ಎಲ್ಲವನ್ನೂ ಸಮರ್ಥನೆ ಮಾಡಿಕೊಳ್ಳುವ ಭಂಡತನಕ್ಕೆ ಇಳಿಯುತ್ತದೆ......

ನಮ್ಮ ಸಹಜ ಸುಖ ಸಂತೋಷ ನೆಮ್ಮದಿಯ ಜೀವನಮಟ್ಟವನ್ನೇ ಈ ಭ್ರಷ್ಟಾಚಾರ ನಾಶ ಮಾಡುತ್ತಿದೆ. ಕೆಟ್ಟವರನ್ನು ಬಿಡಿ, ಕನಿಷ್ಟ ಒಳ್ಳೆಯವರು ಒಳ್ಳೆಯವರಾಗಿ ಬದುಕಲು ಸಹ ಈ ಭ್ರಷ್ಟಾಚಾರ ಅವಕಾಶ ನೀಡುತ್ತಿಲ್ಲ. ಇದು ಅತ್ಯಂತ ಅಪಾಯಕಾರಿ ಮತ್ತು ದುರಂತ.......

ಮನುಷ್ಯನ ಆತ್ಮ ಮತ್ತು ಮನಸ್ಸುಗಳನ್ನು ಶುದ್ಧೀಕರಿಸಿ ಅದರ ಮೂಲಕ ಸಮಾಜದ ಮೂಲ ಆಶಯವನ್ನು ಸಾಮೂಹಿಕವಾಗಿ ಪರಿವರ್ತಿಸಿದರೆ ಭ್ರಷ್ಟಾಚಾರ ಕಡಿಮೆ ಮಾಡುವ ಸಾಧ್ಯತೆ ಇದೆ. ಕೇವಲ ಕಠಿಣ ಕಾನೂನುಗಳಿಂದ ಭಾರತದಂತಹ ಬೃಹತ್ ದೇಶದಲ್ಲಿ ಭ್ರಷ್ಟಾಚಾರ ನಿಯಂತ್ರಿಸುವುದು ಸಾಧ್ಯವಿಲ್ಲ. ನೀರಿನಂತೆ ಭ್ರಷ್ಟಾಚಾರ ಕೂಡ ಸ್ಥಿತಿಸ್ಥಾಪಕತ್ವ ಗುಣವನ್ನು ಹೊಂದಿದೆ. ಅದು ಸಹಜವಾಗಿಯೇ ತನ್ನ ಸ್ಥಾನ ಸಂಬಂಧಗಳನ್ನು ಅವಶ್ಯಕತೆಗೆ ಅನುಗುಣವಾಗಿ ತಾನೇ ಹುಡುಕಿಕೊಳ್ಳುತ್ತದೆ.....

## ಮಂತ್ರಿಗಳ ರಾಜೀನಾಮೆ, ಅಧಿಕಾರಿಗಳ ಮೇಲೆ ದಾಳಿ

ಮತ್ತಷ್ಟು ಕಠಿಣ ಕಾನೂನು ಮುಂತಾದ ಯಾವುದೂ ಉಪಯೋಗವಿಲ್ಲ. ನೈತಿಕತೆ ಮತ್ತು ಮಾನವೀಯತೆಯ ಆಧಾರದ ಮೇಲೆ ಈ ಸಮಾಜವನ್ನು ಪುನರ್ ರೂಪಿಸಬೇಕಿದೆ. ಧಾರ್ಮಿಕ ಆಧ್ಯಾತ್ಮಿಕ ಗುರು ಪರಂಪರೆ ಆರೋಗ್ಯ ಸಮಾಜ ಸೇವೆ ಪತ್ರಿಕೋದ್ಯಮ ಸೇರಿ ಎಲ್ಲವೂ ಬಹುತೇಕ ಭ್ರಷ್ಟಗೊಂಡಿರುವಾಗ ಇದರ ನಿರ್ಮೂಲನೆ ತುಂಬಾ ಕಷ್ಟ. ಆದರೆ ಅಸಾಧ್ಯವಲ್ಲ. ಖಂಡಿತ ಕೆಟ್ಟ ಹಣದ ಮಹತ್ವ ಕಡಿಮೆಯಾಗಿ ಶ್ರಮದ ಪ್ರಾಮುಖ್ಯತೆ ಹೆಚ್ಚು ಮಾಡುವ ಮಾನವೀಯ ಮೌಲ್ಯಗಳನ್ನು ಹೆಚ್ಚು ಹೆಚ್ಚು ಪ್ರಚಾರ ಮಾಡಿದರೆ, ಸಾಮಾನ್ಯ ಜನರಾದ ನಾವುಗಳು ಹಣ ಅಧಿಕಾರಕ್ಕಿಂತ ಮನುಷ್ಯನ ನಿಜವಾದ ಮತ್ತು ಪ್ರಾಮಾಣಿಕ ವ್ಯಕ್ತಿತ್ವಕ್ಕೆ ಗೌರವ ಕೊಡುವ ಸರಳ ಮನೋಭಾವ ಪ್ರದರ್ಶಿಸಿದರೆ ಭ್ರಷ್ಟಾಚಾರ ಸಾಕಷ್ಟು ಕಡಿಮೆಯಾಗುತ್ತದೆ.....


## ಅದಕ್ಕಾಗಿ ಒಂದು ಸರಳ ಸೂತ್ರ ದಯವಿಟ್ಟು ಅಳವಡಿಸಿಕೊಳ್ಳೋಣ.....

" ಒಳ್ಳೆಯವರ ಪ್ರೋತ್ಸಾಹ ಮತ್ತು ಜೊತೆ ಜೊತೆಗೆ ಕೆಟ್ಟವರ ತಿರಸ್ಕಾರ ಅಥವಾ ಅದು ಸಾಧ್ಯವಾಗದಿದ್ದರೆ ಕೆಟ್ಟವರ ನಿರ್ಲಕ್ಷ್ಯ " ಇದು ನಮ್ಮಿಂದ ಸಾಧ್ಯವಾದರೆ ಈ ಸಮಾಜದಲ್ಲಿ ಭ್ರಷ್ಟಾಚಾರ ಕಡಿಮೆ ಆಗುವ ಸಾಧ್ಯತೆ ಇದೆ. ನಮ್ಮ ಜಾತಿಯವನು ನಮ್ಮ ಪಕ್ಷದವನು ನಮ್ಮ ಧರ್ಮದವನು ನಮ್ಮ ಊರಿನವನು ಎಂದು ಕಳ್ಳ ಸುಳ್ಳ ಜೈಲಿಗೆ ಹೋಗಿ ಬಂದವನನ್ನು, ರಾಜಿನಾಮೆ ಕೊಡುವವನನ್ನು ಅತ್ತು ಕರೆದು ಹೆಗಲ ಮೇಲೆ ಹೊತ್ತು ತಿರುಗಿದರೆ ಈ ಸಮಾಜದ ಅಧೋಗತಿ ತಡೆಯಲು ಯಾರಿಂದಲೂ ಸಾಧ್ಯವಿಲ್ಲ.....

ದಯವಿಟ್ಟು ಸ್ವಾಭಿಮಾನವನ್ನು ಮಾರಿಕೊಳ್ಳಬೇಡಿ. ಅವನು ಯಾರೇ ಆಗಿರಲಿ. ಒಳ್ಳೆಯವನು ಮಾತ್ರ ನಮ್ಮವನು. ಅವನಿಗೆ ಮಾತ್ರ ನಮ್ಮ ಪ್ರೀತಿ ಪ್ರೋತ್ಸಾಹ ಬೆಂಬಲ ಮತ್ತು ನಮ್ಮ ಮತ........ ಆ ಬದಲಾವಣೆಯ ನಿರೀಕ್ಷೆಯಲ್ಲಿ ನಿಮ್ಮೊಂದಿಗೆ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ



■ ಲೇಖನ
ವಿವೇಕಾನಂದ. ಹೆಚ್.ಕೆ.
9844013068

# ಕಾಯಕ ನಿಷ್ಠೆಯ ಮೂಲಕ ಸಮಾಜ ಸುಧಾರಣೆಗೆ ನುಲಿಯ ಚಂದಯ್ಯ ಅತ್ಯುನ್ನತ ಕೊಡುಗೆ ನೀಡಿದ್ದಾರೆ ; ಸಂತೋಷ್ ಪಾಟೀಲ್

» **ದಾವಣಗೆರೆ**

ವಚನ, ಕಾಯಕ ನಿಷ್ಠೆಯ ಮೂಲಕ ಸಮಾಜ ಸುಧಾರಣೆಗೆ ನುಲಿಯ ಚಂದಯ್ಯ ಅತ್ಯುನ್ನತ ಕೊಡುಗೆ ನೀಡಿದ್ದಾರೆ ಎಂದು ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್ ತಿಳಿಸಿದರು.

ಅವರು (19) ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ದಾವಣಗೆರೆ ಕೊರಚ, ಕೊರಮ ಸಮಾಜ, ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ನುಲಿಯ ಚಂದಯ್ಯ ಜಯಂತಿಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಮೂಲಕ ಗೌರವ ಸಲ್ಲಿಸಿ ಮಾತನಾಡಿದರು. ಬಸವಣ್ಣನ ಕಾರ್ಯಕ್ಷೇತ್ರ ಕಲ್ಯಾಣಕ್ಕೆ ಬಂದು ಕಲ್ಯಾಣದ ಕೆರೆಗಳಲ್ಲಿ ಸಿಗುವ ಹೊಡಕೆ, ಚೇಣಿ ಮುಂತಾದ ನಾರುಗಳಿಂದ ಹಗ್ಗ ಹೊಸೆದು ಮಾರಾಟ ಮಾಡಿ ಬಂದ ಹಣದಿಂದ ಜಂಗಮ ದಾಸೋಹ ನಡೆಸುತ್ತಿದ್ದರು ಎಂದು ತಿಳಿಸಿದರು.



ನುಲಿಯ ಕಾಯಕದಿಂದಾಗಿ ಮುಂದೆ ನುಲಿಯ ಚಂದಯ್ಯನೆಂದು ಹೆಸರಾದವರು ಹಗ್ಗ ಮಾರುವ ಕಾಯಕವನ್ನು ಅತ್ಯಂತ ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಮಾಡುತ್ತಾ ಬಸವಣ್ಣನವರಿಗೆ ಪ್ರಿಯರಾದರು ಎಂದು ತಿಳಿಸಿದರು.

# ಡಿ. ದೇವರಾಜ ಅರಸು ರವರ 109ನೇ ಜನ್ಮ ದಿನಾಚರಣೆ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಡಿ..ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 20 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಮುದಾಯ ಭವನ, ಇಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಹಿಂದುಳಿದ ವರ್ಗಗಳ ನಾಯಕ, ಸಾಮಾಜಿಕ ಹರಿಕಾರ ಡಿ. ದೇವರಾಜ ಅರಸುರವರ 109ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್.ಮಲ್ಲಿಕಾರ್ಜುನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ. ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಚಿದಾನಂದ. ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್,ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ದೂಡಾ ಅಧ್ಯಕ್ಷರಾದ ದಿನೇಶ್. ಕೆ.ಶೆಟ್ಟಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್ ಭಾಗವಹಿಸುವರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T